ವಿಜಯಪುರ | ಸಂಪುಟ 04 | ಸಂಚಿಕೆ 114 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಗುರುವಾರ, ಜೂನ್, 25, 2026

"ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (SIR) ಪ್ರಕ್ರಿಯೆಯನ್ನು ಕಾಂಗ್ರೆಸ್ ನಾಯಕರು ಅತ್ಯಂತ ಗಂಭೀರವಾಗಿ ಪರಿಗಣಿಸಬೇಕು. ಈ ಕೆಲಸದಲ್ಲಿ ನಿರ್ಲಕ್ಷ್ಯ ತೋರಿದವರಿಗೆ ಮುಂದಿನ ಚುನಾವಣೆಯಲ್ಲಿ ಪಕ್ಷದ ಟಿಕೆಟ್ ಸಿಗುವುದಿಲ್ಲ."



■ ಬಿ.ಕೆ. ಹರಿಪ್ರಸಾದ್
ಕೆಪಿಸಿಸಿ ಅಧ್ಯಕ್ಷರು

## ಸಿಎಂ ಡಿಕೆಶಿ ಭೇಟಿ ಮಾಡಿದ ಕೆಯುಡಬ್ಲ್ಯೂಜೆ ಅಧ್ಯಕ್ಷ ತಗಡೂರು



■ ಉದಯರಶ್ಮಿ ದಿನಪತ್ರಿಕೆ

ಬೆಂಗಳೂರು: ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರ ನೇತೃತ್ವದ ನಿಯೋಗವು ಭೇಟಿ ಮಾಡಿ, ಪುಸ್ತಕ ಮತ್ತು ಗಣಪತಿ ಮೂರ್ತಿಯನ್ನು ನೀಡಿ ಅಭಿನಂದಿಸಿತು.

ಇದೇ ಸಂದರ್ಭದಲ್ಲಿ ಗ್ರಾಮೀಣ ಪತ್ರಕರ್ತರ ಬಸ್ ಪಾಸ್ ಮತ್ತು ಮಾಧ್ಯಮ ಸಂಜೀವಿನಿ ಯೋಜನೆಯನ್ನು ತ್ವರಿತ ಗತಿಯಲ್ಲಿ ಜಾರಿಗೊಳಿಸಬೇಕು ಎಂದು ಕೆಯುಡಬ್ಲ್ಯೂಜೆ ವತಿಯಿಂದ ಮನವಿಯನ್ನು ಸಲ್ಲಿಸಲಾಯಿತು.

ಈ ಬಗ್ಗೆ ಕ್ರಮ ತೆಗೆದುಕೊಳ್ಳುವುದಾಗಿ ಸಿಎಂ ಭರವಸೆ ನೀಡಿದರು.


ಜುಲೈ 1 ರಂದು ಪತ್ರಿಕಾ ದಿನಾಚರಣೆಯನ್ನು ವಾರ್ತಾ ಇಲಾಖೆ, ಮಾಧ್ಯಮ ಅಕಾಡೆಮಿ ಮತ್ತು ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ ಸಂಯುಕ್ತಾಶ್ರಯದಲ್ಲಿ ಪ್ರತಿ ವರ್ಷ ಆಚರಣೆ ಮಾಡಿಕೊಂಡು ಬರಲಾಗುತ್ತಿದೆ. ಪ್ರತಿ ವರ್ಷವೂ ಮುಖ್ಯಮಂತ್ರಿಗಳು ಪತ್ರಿಕಾ ದಿನಾಚರಣೆ ಉದ್ಘಾಟನೆ ಮಾಡಿಕೊಂಡು ಬಂದಿದ್ದಾರೆ. ಈ ಬಾರಿ ತಾವು ಉದ್ಘಾಟನೆಗೆ ಆಗಮಿಸಬೇಕು ಎಂದು ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಮನವಿ ಮಾಡಿದರು.

ಇದಕ್ಕೆ ಸಕಾರಾತ್ಮಕವಾಗಿ ಸ್ಪಂಧಿಸಿದ ಸಿಎಂ ಡಿ.ಕೆ.ಶಿವಕುಮಾರ್ ಅವರು, ಬ್ಯೂಸಿ ಇದ್ದೇನೆ. ಆದರೂ, ಕಾರ್ಯಕ್ರಮದಲ್ಲಿ ಭಾಗವಹಿಸಲು ಪ್ರಯತ್ನಿಸುವೆ ಎಂದು ಭರವಸೆ ನೀಡಿದರು.

ನಿಯೋಗದಲ್ಲಿ ಬೀದರ್ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಆನಂದ್ ದೇವಪ್ಪ, ಪ್ರಧಾನ ಕಾರ್ಯದರ್ಶಿ ಶಿವಕುಮಾರ್, ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಚಾಮರಾಜನಗರದ ಮಹೇಂದ್ರ, ಪತ್ರಕರ್ತರು ಜೊತೆಯಲ್ಲಿದ್ದರು

# ಖರ್ಗೆ ಕುಟುಂಬದಿಂದ ಭೂಕಬಳಿಕೆ: ಬಿಜೆಪಿ ಆರೋಪ

## ಖರ್ಗೆ ಕುಟುಂಬದ ವಿರುದ್ಧ ಮೂರು ಪ್ರಮುಖ ಭೂ ಹಗರಣಗಳ ವಿವರಗಳನ್ನು ಬಿಡುಗಡೆ ಮಾಡಿದ ಬಿಜೆಪಿ ವಕ್ತಾರ ಪ್ರದೀಪ್ ಭಂಡಾರಿ





ನವದೆಹಲಿ: ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಕರ್ನಾಟಕ ಗೃಹ ಸಚಿವ ಪ್ರಿಯಾಂಕ ಖರ್ಗೆ ಅವರ ವಿರುದ್ಧ ಬಿಜೆಪಿ ಭೂಕಬಳಿಕೆ ಮತ್ತು ಭ್ರಷ್ಟಾಚಾರದ ಗಂಭೀರ ಆರೋಪಗಳನ್ನು ಬುಧವಾರ ಮಾಡಿದೆ.

ಬುಧವಾರ ದೆಹಲಿಯ ಬಿಜೆಪಿ ಪ್ರಧಾನ ಕಚೇರಿಯಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಬಿಜೆಪಿ ವಕ್ತಾರ ಪ್ರದೀಪ್ ಭಂಡಾರಿ ಅವರು, ಮಲ್ಲಿಕಾರ್ಜುನ ಖರ್ಗೆ ಮತ್ತು ಅವರ ಕುಟುಂಬದ ಒಡೆತನದ ಸಿದ್ಧಾರ್ಥ ವಿಹಾರ್ ಟ್ರಸ್ಟ್‌ಗೆ "ಬಡವರಿಗೆ ಸೇರಿದ ಭೂಮಿಯನ್ನು ಅಕ್ರಮವಾಗಿ ಹಂಚಿಕೆ ಮಾಡಲಾಗಿದೆ" ಎಂದು ಆರೋಪಿಸಿದರು.

ಮಲ್ಲಿಕಾರ್ಜುನ ಖರ್ಗೆ ಹಾಗೂ ಅವರ ಕುಟುಂಬಸ್ಥರು ಮುನ್ನಡೆಸುತ್ತಿರುವ ಖಾಸಗಿ ಟ್ರಸ್ಟ್‌ಗೆ ಕರ್ನಾಟಕದಲ್ಲಿ 100 ಕೋಟಿ ರೂ. ಮೌಲ್ಯದ ಪ್ರಮುಖ ಸರ್ಕಾರಿ ಜಮೀನನ್ನು ನಿಯಮ ಉಲ್ಲಂಘಿಸಿ ಹಂಚಿಕೆ ಮಾಡಲಾಗಿದೆ ಎಂದು ಭಂಡಾರಿ ಆರೋಪಿಸಿದರು.

ಖರ್ಗೆ ಕುಟುಂಬದ ವಿರುದ್ಧ ಮೂರು ಪ್ರಮುಖ ಭೂ ಹಗರಣಗಳ ವಿವರಗಳನ್ನು ಬಿಡುಗಡೆ ಮಾಡಿದ ಪ್ರದೀಪ್ ಭಂಡಾರಿ, ಸಿದ್ಧಾರ್ಥ ವಿಹಾರ್ ಟ್ರಸ್ಟ್ ನಲ್ಲಿ ಕೇವಲ ಖರ್ಗೆ ಕುಟುಂಬದ ಸದಸ್ಯರು ಮಾತ್ರ ಇದ್ದಾರೆ. ಸಿದ್ದಾರ್ಥ ವಿಹಾರ್ ಟ್ರಸ್ಟ್‌ನಲ್ಲಿ ಮಲ್ಲಿಕಾರ್ಜುನ ಖರ್ಗೆ, ಅವರ ಪುತ್ರ ಪ್ರಿಯಾಂಕ್ ಖರ್ಗೆ, ಖರ್ಗೆ ಅವರ ಅಳಿಯ ಮತ್ತು ಅವರ ಧರ್ಮಪತ್ನಿ ಸದಸ್ಯರಾಗಿದ್ದಾರೆ. ಇಡೀ ಕುಟುಂಬವೇ ಸೇರಿಕೊಂಡು ತಮ್ಮ ರಾಜಕೀಯ ಪ್ರಭಾವ ಹಾಗೂ ಅಧಿಕಾರವನ್ನು ದುರುಪಯೋಗಪಡಿಸಿಕೊಂಡು ಕರ್ನಾಟಕದ ವಿವಿಧೆಡೆ ಬಡವರ ಭೂಮಿಯನ್ನು ಲೂಟಿ ಮಾಡಿದೆ ಎಂದು ಆರೋಪಿಸಿದರು.

"ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದಾಗ 2024ರಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (KIADB) ವತಿಯಿಂದ 'ಏರೋಸ್ಪೇಸ್ ಮತ್ತು ಡಿಫೆನ್ಸ್ ಸಂಶೋಧನೆ ಮತ್ತು ಅಭಿವೃದ್ಧಿ' ಹೆಸರಿನಲ್ಲಿ ಸಿದ್ಧಾರ್ಥ ವಿಹಾರ್ ಟ್ರಸ್ಟ್‌ಗೆ ಭಾರಿ ಮೌಲ್ಯದ 5 ಎಕರೆ ಜಮೀನನ್ನು ಹಂಚಿಕೆ ಮಾಡಲಾಗಿದೆ. ಕೈಗಾರಿಕಾ ಉದ್ದೇಶಗಳಿಗಾಗಿ ಬಳಸಬೇಕಿದ್ದ ಈ ಜಮೀನನ್ನು ಖರ್ಗೆ ಅವರ ಖಾಸಗಿ ಟ್ರಸ್ಟ್‌ಗೆ ನೀಡಲಾಗಿದ್ದು, ಇದರ ಪ್ರಸ್ತುತ ಮಾರುಕಟ್ಟೆ ಮೌಲ್ಯ ಸುಮಾರು 100 ಕೋಟಿ ರೂ." ಎಂದು ಬಿಜೆಪಿ ಹೇಳಿದೆ.

## ಆರೆಸ್ಸೆಸ್ ದಾಖಲೆಗಳನ್ನು ಸಲ್ಲಿಸದಿದ್ದರೆ ಕಾನೂನು ಕ್ರಮ



ಬೆಂಗಳೂರು: ರಾಷ್ಟ್ರೀಯ ಸ್ವಯಂಸೇವಕ ಸಂಘ(RSS) ನೋಂದಣಿ ಬಗ್ಗೆ ಮಾಹಿತಿ ನೀಡುವಂತೆ ಪಟ್ಟು ಹಿಡಿದಿರುವ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಸಂಬಂಧಿಸಿದ ದಾಖಲೆಗಳನ್ನು ಸಲ್ಲಿಸದಿದ್ದರೆ ಸಂಘದ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವ ಬಗ್ಗೆ ಸುಳಿವು ನೀಡಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ನಾನು ಬರೆದ ಪತ್ರಕ್ಕೆ ಆರ್‌ಎಸ್‌ಎಸ್ ನಿಂದ ಯಾವುದೇ ತೃಪ್ತಿದಾಯಕ ಉತ್ತರ ಸಿಗದಿದ್ದರೆ ಕಾನೂನು ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದ್ದಾರೆ. ಆರ್‌ಎಸ್‌ಎಸ್ ದಾಖಲೆಗಳನ್ನು ನೀಡದಿದ್ದರೆ ಮುಂದಿನ ಕ್ರಮ ಏನು? ಎಂದು ವರದಿಗಾರರು ಕೇಳಿದಾಗ, ದೇಶದಲ್ಲಿ ಕಾನೂನು ಇದೆ. ಕಾನೂನಿನ ಪ್ರಕಾರ ಮುಂದಿನ ಕ್ರಮ ಕೈಗೊಳ್ಳುವುದಾಗಿ ಖರ್ಗೆ ತಿಳಿಸಿದರು.

## ಬೆಳೆ ವಿಮೆ ತುಂಬಲು ಸೂಚನೆ

■ ಉದಯರಶ್ಮಿ ದಿನಪತ್ರಿಕೆ

ಬಸವನಬಾಗೇವಾಡಿ: ಬಸವನಬಾಗೇವಾಡಿ, ಕೊಲ್ಹಾರ, ನಿಡಗುಂದಿ ತಾಲೂಕುಗಳಲ್ಲಿ ಮುಂಗಾರು ಹಂಗಾಮಿನ ಕೃಷಿ ಚಟುವಟಿಕೆಗಳು ಆರಂಭವಾಗಿರುತ್ತವೆ. ರೈತರು ತಮ್ಮ ಬೆಳೆಗಳನ್ನು ಪ್ರಕೃತಿ ವಿಕೋಪಗಳಿಂದ ರಕ್ಷಿಸಿಕೊಳ್ಳಲು ಬೆಳೆ ವಿಮೆ ಮಾಡಿಸಿಕೊಳ್ಳುವುದು ಅತ್ಯಂತ ಮಹತ್ವದ್ದು ಮತ್ತು ಅಗತ್ಯವಾಗಿರುತ್ತದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಹಯೋಗದಲ್ಲಿ ಕರ್ನಾಟಕ ರಾಜ್ಯ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯಡಿ ರೈತರು ತಮ್ಮ ಬೆಳೆಗಳಿಗೆ ವಿಮೆ ಮಾಡಿಸಿಕೊಳ್ಳಬಹುದಾಗಿದೆ. ಇತ್ತೀಚಿನ ವರ್ಷಗಳಲ್ಲಿ ಅನಿಯಮಿತ ಮಳೆ, ಬರ, ಗಾಳಿಮಳೆ, ಪ್ರವಾಹ, ಕೀಟ ಹಾಗೂ ರೋಗಬಾಧೆ ಮುಂತಾದ ಕಾರಣಗಳಿಂದ ರೈತರು ಅಪಾರ ನಷ್ಟ ಅನುಭವಿಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಬೆಳೆ ವಿಮೆ ರೈತರಿಗೆ ಆರ್ಥಿಕ ನೆರವು ಒದಗಿಸಿ ಕೃಷಿಯಲ್ಲಿ ಸ್ಥಿರತೆ ಕಾಪಾಡಲು ಸಹಕಾರಿಯಾಗುತ್ತದೆ. 2026 ಮುಂಗಾರು ಹಂಗಾಮಿಗೆ ಬಸವನಬಾಗೇವಾಡಿ ತಾಲೂಕಿನಲ್ಲಿ ತೊಗರಿ, ಮುಸಕಿನಜೋಳ, ಈರುಳ್ಳಿ, ಸಜ್ಜೆ ಮತ್ತು ಸೂರ್ಯಕಾಂತಿ, ಹತ್ತಿ, ನಿಡಗುಂದಿ ತಾಲೂಕಿನಲ್ಲಿ ತೊಗರಿ, ಮುಸಕಿನಜೋಳ, ಈರುಳ್ಳಿ ಮತ್ತು ಸೂರ್ಯಕಾಂತಿ, ಕೊಲ್ಹಾರ ತಾಲೂಕಿನಲ್ಲಿ ತೊಗರಿ, ಮುಸಕಿನಜೋಳ, ಈರುಳ್ಳಿ ಮತ್ತು ಸಜ್ಜೆ ಅಧಿಸೂಚಿತ ಬೆಳೆಗಳನ್ನು ವಿಮಾ ವ್ಯಾಪ್ತಿಗೆ ಒಳಪಡಿಸಲಾಗಿದೆ. ಬೆಳೆ ಸಾಲ ಪಡೆದ ಮತ್ತು ಪಡೆಯದ ಎಲ್ಲಾ ರೈತರು ಯೋಜನೆಯ ಸೌಲಭ್ಯ ಪಡೆಯಬಹುದು. ನಮ್ಮ ಜಿಲ್ಲೆಗೆ ಎಸ್.ಬಿ.ಆಯ್, ಜನರಲ್ ಇನ್ಶೂರನ್ಸ್ ಕಂಪನಿ ಆಯ್ಕೆಯಾಗಿದೆ. ತೊಗರಿ (ಮಳೆಯಾಶ್ರಿತ), ತೊಗರಿ (ನೀರಾವರಿ) ಮುಸಕಿನ ಜೋಳ (ನೀರಾವರಿ), ಮುಸಕಿನ ಜೋಳ (ಮಳೆಯಾಶ್ರಿತ), ಸಜ್ಜೆ (ಮಳೆಯಾಶ್ರಿತ), ಸೂರ್ಯಕಾಂತಿ (ಮಳೆಯಾಶ್ರಿತ) ಬೆಳೆಗಳಿಗೆ ವಿಮೆ ಕಟ್ಟಲು ಜುಲೈ 31 ಕೊನೆಯ ದಿನವಾಗಿದೆ. ಈರುಳ್ಳಿ (ನೀರಾವರಿ), ಹತ್ತಿ (ಮಳೆಯಾಶ್ರಿತ) ಬೆಳೆಗೆ ವಿಮೆ ಕಟ್ಟಲು ಆಗಷ್ಟ್ 14 ಕೊನೆಯ ದಿನವಾಗಿದೆ. ಬೆಳೆ ವಿಮೆ ನೋಂದಣಿಗೆ ರೈತರು ಕಡ್ಡಾಯವಾಗಿ ಫ್ರೂಟ್ಸ್ ಐ.ಡಿ. (ಎಫ್.ಐ.ಡಿ), ಎನ್.ಪಿ.ಸಿ.ಐ ಸಿಡಿಂಗ್ ಆಗಿರುವ ಬ್ಯಾಂಕ್ ಖಾತೆ, ಆಧಾರ್ ಕಾರ್ಡ ಮತ್ತು ಜಮೀನಿನ ದಾಖಲೆಗಳನ್ನು ಹೊಂದಿರಬೇಕು. ಸಮಯಕ್ಕೆ ಸರಿಯಾಗಿ ಮಾಹಿತಿ ನೀಡಿದರೆ ಪರಿಹಾರ ಪಡೆಯಲು ಅನುಕೂಲವಾಗುತ್ತದೆ. ಬಸವನಬಾಗೇವಾಡಿ, ನಿಡಗುಂದಿ ಮತ್ತು ಕೊಲ್ಹಾರ ತಾಲೂಕಿನ ರೈತ ಬಾಂಧವರು ಬೆಳೆ ವಿಮೆ ಯೋಜನೆಯ ಸದುಪಯೋಗ ಪಡೆದು ತಮ್ಮ ಬೆಳೆ ಸುರಕ್ಷಿತಗೊಳಿಸಿಕೊಳ್ಳುವಂತೆ ಕೃಷಿ ಇಲಾಖೆಯ ಸಹಾಯಕ ಕೃಷಿ ನಿರ್ದೇಶಕ ಅಮಗೊಂಡ ಬಿರಾದಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ಅಕ್ರಮ ಎಲ್‌ಪಿಜಿ ಗ್ಯಾಸ್ ತುಂಬುವಿಕೆ ಪತ್ತೆ : ಸಿಲಿಂಡರ್‌ಗಳ ವಶ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ ನಗರದ ರಹಿಂನಗರದಲ್ಲಿ ಶ್ರೀಮತಿ ರಾಜೇಶ್ವರಿ ಮಲ್ಲಪ್ಪ ಬರಟಗಿ ಅವರ ಖಾಲಿ ಜಾಗೆಯಲ್ಲಿದ್ದ ಶೆಡ್‌ನಲ್ಲಿ ಗೃಹಬಳಕೆಯ ಎಲ್‌ಪಿಜಿ ಸಿಲಿಂಡರ್‌ಗಳಿಂದ ವಾಣಿಜ್ಯ ಸಿಲಿಂಡರ್‌ಗಳಿಗೆ ಅಕ್ರಮವಾಗಿ ಗ್ಯಾಸ್ ತುಂಬಿಸಿ ಹೋಟೆಲ್‌ಗಳಿಗೆ ಮಾರಾಟ ಮಾಡಲಾಗುತ್ತಿದೆ ಎಂಬ ಖಚಿತ ಮಾಹಿತಿಯ ಮೇರೆಗೆ ಆಹಾರ ಇಲಾಖೆ ಅಧಿಕಾರಿಗಳು ಹಾಗೂ ಪೊಲೀಸರು ಜಂಟಿ ದಾಳಿ ನಡೆಸಿದರು. ದಾಳಿಯ ವೇಳೆ ಸುಮಾರು 10 ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ಗಳು ಮತ್ತು 13 ಗೃಹಬಳಕೆಯ ಸಿಲಿಂಡರ್‌ಗಳು ಪತ್ತೆಯಾಗಿದ್ದು, ಅವುಗಳನ್ನು ವಶಪಡಿಸಿಕೊಳ್ಳಲಾಗಿದೆ.

ಈ ಸಂಬಂಧ ಎಲ್‌ಪಿಜಿ (ಪೂರೈಕೆ ಮತ್ತು ವಿತರಣೆ ನಿಯಂತ್ರಣ) ಆದೇಶ-2000 ಹಾಗೂ ಅಗತ್ಯ ವಸ್ತುಗಳ ಕಾಯ್ದೆ-1955ರ ಸೆಕ್ಷನ್ 3/7ರ ಅಡಿಯಲ್ಲಿ ಗಾಂಧೀಚೌಕ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಆಹಾರ ನಿರೀಕ್ಷಕ ಶಂಕರಗೌಡ ಬಿ. ಬಿರಾದಾರ ಅವರು ದೂರು ದಾಖಲಿಸಿದ್ದು, ಗೃಹಬಳಕೆಯ ಸಿಲಿಂಡರ್‌ಗಳ ಗ್ಯಾಸ್ ಅನ್ನು ವಾಹನಗಳಿಗೆ ಅಥವಾ ವಾಣಿಜ್ಯ ಸಿಲಿಂಡರ್‌ಗಳಿಗೆ ಅಕ್ರಮವಾಗಿ ತುಂಬಿಸಿ ಮಾರಾಟ ಮಾಡುವುದು ಕಾನೂನುಬಾಹಿರ ಎಂದು ತಿಳಿಸಿದ್ದಾರೆ.

ಜಿಲ್ಲೆಯ ಎಲ್ಲಾ ಹೋಟೆಲ್ ಮಾಲೀಕರು ಸರ್ಕಾರದಿಂದ ಅಧಿಕೃತ ಮಾನ್ಯತೆ ಪಡೆದ ವಾಣಿಜ್ಯ ಎಲ್‌ಪಿಜಿ ವಿತರಕರಿಂದ ಕಸ್ಟಮರ್ ಐಡಿ ಪಡೆದು ವಾಣಿಜ್ಯ ಸಿಲಿಂಡರ್‌ಗಳನ್ನು ಬಳಸುವಂತೆ ಸೂಚಿಸಲಾಗಿದೆ. ಅನಧಿಕೃತ ಎಲ್‌ಪಿಜಿ ಬಳಕೆ ಕಂಡುಬಂದರೆ ಸಂಬಂಧಿಸಿದ ಹೋಟೆಲ್ ಮಾಲೀಕರ ವಿರುದ್ಧವೂ ಅಗತ್ಯ ವಸ್ತುಗಳ ಕಾಯ್ದೆಯಡಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಇಲಾಖೆ ಎಚ್ಚರಿಕೆ ನೀಡಿದೆ.

## ವಿಶೇಷ ಚೇತನರ ಅನುದಾನ ಸಮರ್ಪಕವಾಗಿ ಬಳಸಿ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಸರ್ಕಾರಿ ಹಾಗೂ ಅರೆ ಸರ್ಕಾರಿ ಕಚೇರಿಗಳಲ್ಲಿ ವಿಶೇಷ ಚೇತನರಿಗೆ ಯಾವುದೇ ರೀತಿಯ ಅಡೆತಡೆ ಉಂಟಾಗದಂತೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಿ, ವಿಶೇಷ ಚೇತನರಿಗಾಗಿ ಮೀಸಲಿರುವ ಶೇ.5ರಷ್ಟು ಅನುದಾನವನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ.ಔದ್ರಾಮ ಅವರು ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ವಿಶೇಷ ಚೇತನರ ಕುಂದು-ಕೊರತೆಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿಶೇಷ ಚೇತನರಿಗೆ ವಿವಿಧ ಇಲಾಖೆಗಳ ಮೂಲಕ ದೊರೆಯುವ ಸೌಲಭ್ಯಗಳು ಮತ್ತು ಯೋಜನೆಗಳ ಅನುಷ್ಠಾನದ ಕುರಿತು ಪರಿಶೀಲನೆ ನಡೆಸಿದ ಅವರು, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವತಿಯಿಂದ ನೀಡಲಾಗುವ ವಿಶೇಷ ಚೇತನರ ಬಸ್‌ಪಾಸ್ ವಿತರಣೆಯನ್ನು ಮತ್ತಷ್ಟು ಸರಳೀಕರಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಮಹಾನಗರ ಪಾಲಿಕೆ, ನಗರಾಭಿವೃದ್ಧಿ ಪ್ರಾಧಿಕಾರ ಸೇರಿದಂತೆ ಎಲ್ಲಾ ಇಲಾಖೆಗಳ ಕಚೇರಿಗಳ ಸೂಚನಾ ಫಲಕಗಳಲ್ಲಿ ವಿಶೇಷ ಚೇತನರಿಗಾಗಿ ಮೀಸಲಿರುವ ಶೇ.5ರ ಅನುದಾನ ಹಾಗೂ ಸೌಲಭ್ಯಗಳ ಮಾಹಿತಿಯನ್ನು ಸಾರ್ವಜನಿಕರಿಗೆ ಗೋಚರಿಸುವಂತೆ ಪ್ರದರ್ಶಿಸಬೇಕು ಎಂದು ಸೂಚಿಸಿದರು.

ಮಾಸಾಶನ (ಪಿಂಚಣಿ) ಸಂಬಂಧಿತ ಬಾಕಿ ಪ್ರಕರಣಗಳನ್ನು ಮುಂಬರುವ ಒಂದು ವಾರದೊಳಗೆ ವಿಲೇವಾರಿ ಮಾಡಿ ಅರ್ಹರಿಗೆ ಸೌಲಭ್ಯ ತಲುಪುವಂತೆ ಕ್ರಮವಹಿಸಬೇಕು. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ವಿಶೇಷ ಚೇತನರ ಕ್ರೀಡಾ ಚಟುವಟಿಕೆಗಳಿಗೆ ಹೆಚ್ಚಿನ ಆದ್ಯತೆ ನೀಡುವಂತೆ ಸೂಚಿಸಿದರು.

ಅಲ್ಲದೆ,ಮಹಾನಗರಪಾಲಿಕೆವ್ಯಾಪ್ತಿಯಲ್ಲಿ ಸಾರ್ವಜನಿಕ ಬಳಕೆಗೆ ಅನುಕೂಲವಾಗುವ ವಿಶೇಷ ಚೇತನರ ಸ್ನೇಹಿ ಶೌಚಾಲಯಗಳ ನಿರ್ಮಾಣಕ್ಕೆ ಕ್ರಮ ಕೈಗೊಳ್ಳುವಂತೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ಜಗದೀಶ ಕೆ., ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಸಂಪತ್ ಗುಣಾರಿ, ಮಹಾನಗರ ಪಾಲಿಕೆಯ ಮಹಾವೀರ ಬೋರಣ್ಣನವರ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಕೆ.ಎ. ಉಪ್ಪಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರೂಪಣಾಧಿಕಾರಿ ನಿರ್ಮಲ ಸುರಪುರ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿ, ಸಿಬ್ಬಂದಿಗಳು ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ವಿಶೇಷ ಚೇತನರು ಉಪಸ್ಥಿತರಿದ್ದರು.

# ಆಲಮಟ್ಟಿ ಡ್ಯಾಂ ಎತ್ತರದ ಹಿನ್ನೀರಿನಿಂದ ಬಾಧಿತರ ಹಿತ ಕಾಪಾಡಲು ಬದ್ಧ

## ವಿಜಯಪುರದಲ್ಲಿ ಕೈಗಾರಿಕೆ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವ ಎಂ.ಬಿ.ಪಾಟೀಲ ಭರವಸೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಯುಕೆಪಿ 3ನೇ ಹಂತದಲ್ಲಿ ಬರುವ ಆಲಮಟ್ಟಿ ಜಲಾಶಯ ಎತ್ತರದ ಹಿನ್ನೀರಿನಿಂದ ಬಾಧಿತವಾಗುವ ಎಲ್ಲ ಗ್ರಾಮಸ್ಥರ ಹಿತ ಕಾಪಾಡಲು ಬದ್ಧನಾಗಿದ್ದೇನೆ ಎಂದು ಕೈಗಾರಿಕೆ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವ ಎಂ. ಬಿ. ಪಾಟೀಲ ತಿಳಿಸಿದ್ದಾರೆ.

ಬುಧವಾರ ತಮ್ಮ ಗೃಹ ಕಚೇರಿಯಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆ ಮುಳುಗಡೆ ಸಂತ್ರಸ್ಥರ ಹೋರಾಟ ಸಮಿತಿ ಪದಾಧಿಕಾರಿಗಳು ಮತ್ತು ರೈತರೊಂದಿಗೆ ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ಆಲಮಟ್ಟಿ ಜಲಾಶಯದ ಎತ್ತರ ಹೆಚ್ಚಳ ಮತ್ತು ನೀರು ಹಂಚಿಕೆ ಕುರಿತು 2010ರಲ್ಲಿ ತೀರ್ಪು ಬಂದಿತ್ತು. ನಂತರ 2013ರಲ್ಲಿ ನಾನು ಜಲಸಂಪನ್ಮೂಲ ಸಚಿವನಾಗಿದ್ದಾಗ ಒಟ್ಟು 130 ಟಿಎಂಸಿ ನೀರು ಹಂಚಿಕೆಯಾಗಿತ್ತು. ಇದರಿಂದ 1.30 ಲಕ್ಷ ಎಕರೆ ಭೂಸ್ವಾಧೀನ ಅಗತ್ಯವಾಗಿತ್ತು. ಪ್ರತಿ ಎಕರೆ ಒಣಬೇಸಾಯ ಜಮೀನಿಗೆ ರೂ. 8 ಲಕ್ಷ ಮತ್ತು ನೀರಾವರಿ ಜಮೀನಿಗೆ ರೂ. 12 ಲಕ್ಷ ನಿಗದಿ ಪಡಿಸಲಾಗಿತ್ತು. ಆದರೆ, ಅಂದು ಹಣಕಾಸು ಇಲಾಖೆ ಸಧ್ಯಕ್ಕೆ ಆರ್ಥಿಕವಾಗಿ ಯೋಜನೆ ಜಾರಿ ಮತ್ತು ಪರಿಹಾರ ಕಾರ್ಯಸಾಧುವಲ್ಲ ಎಂದು ಯೋಜನೆಯನ್ನು ಮುಂದೂಡಿತ್ತು. ಆದರೆ, 2023ರಲ್ಲಿ ನಮ್ಮ ಸರಕಾರ ಮತ್ತೆ ಅಧಿಕಾರಕ್ಕೆ ಬಂದ ಮೇಲೆ ನಾನು ಅಂದಿನ ಸಿಎಂ ಸಿದ್ಧರಾಮಯ್ಯ, ಜಲಸಂಪನ್ಮೂಲ ಸಚಿವ ಡಿ. ಕೆ. ಶಿವಕುಮಾರ ಅವರಿಗೆ ಒತ್ತಡ ತಂದು ಹೊಸ ನಿಗದಿತ ದರದಂತೆ ಒಣಬೇಸಾಯ ಜಮೀನಿಗೆ ರೂ. 30 ಲಕ್ಷ ಮತ್ತು ನೀರಾವರಿ ಭೂಮಿಗೆ ರೂ. 40 ಲಕ್ಷ ಪರಿಹಾರ ನೀಡಲು ಕ್ರಮ ಕೈಗೊಂಡಿದ್ದೆ. ಪ್ರಸಕ್ತ ಆರ್ಥಿಕ ವರ್ಷದಲ್ಲಿಯೇ ಬಬಲೇಶ್ವರ ತಾಲೂಕಿನ ಬಾಧಿತ ಗ್ರಾಮಗಳಿಗೆ ಸೂಕ್ತ ಪರಿಹಾರ ಒದಗಿಸಲು ನಾನಾ ಹಂತಗಳಲ್ಲಿ ಅಧಿಸೂಚನೆ ಹೊರಡಿಸಲು ಕ್ರಮ ಕೈಗೊಳ್ಳಲು ಕಾರ್ಯೋನ್ಮುಖನಾಗಿದ್ದೇನೆ ಎಂದು ಅವರು ತಿಳಿಸಿದರು.

ಆಲಮಟ್ಟಿ ಜಲಾಶಯವನ್ನು 524.256 ಮೀಟರ್‌ಗೆ ಹೆಚ್ಚಳ ಮಾಡುವುದರಿಂದ ಅಣೆಕಟ್ಟೆಯ ಹಿನ್ನೀರಿನಲ್ಲಿ ಒಟ್ಟು 75,563 ಎಕರೆ ಜಮೀನು ಮುಳುಗಡೆಯಾಗುವ ಸಾಧ್ಯತೆಯಿದೆ. ಅದರಂತೆ ಈ ವರ್ಷದಲ್ಲಿ 49 ಗ್ರಾಮಗಳ ಅಂದಾಜು 15000 ಎಕರೆ ಜಮೀನಿಗೆ ಪರಿಹಾರ ಪಾವತಿಸುವ ಸಾಧ್ಯತೆ ಇದೆ. ಅಲ್ಲದೇ, 2026-27 ಮತ್ತು 2027-28ನೇ ಆರ್ಥಿಕ ವರ್ಷದಲ್ಲಿ ಒಟ್ಟು 79 ಗ್ರಾಮಗಳು ಪ್ರಾಥಮಿಕ ಅಧಿಸೂಚನೆ 11(1) ಅವಾರ್ಡ್‌ವರೆಗೆ ನಾನಾ ಹಂತಗಳಲ್ಲಿವೆ. ಅದರಲ್ಲಿ ವಿಜಯಪುರ ಜಿಲ್ಲೆಯ 31 ಗ್ರಾಮಗಳ ಪೈಕಿ ಆರು ಗ್ರಾಮಗಳು ಮಾತ್ರ ಸೇರಿವೆ. 14 ಕಂದಾಯ ಮತ್ತು ಒಂದು ಉಪಗ್ರಾಮಗಳು ಮುಳುಗಡೆ ವ್ಯಾಪ್ತಿಗೆ ಬರುತ್ತವೆ. ಒಟ್ಟು 75563 ಎಕರೆ ಪೈಕಿ ಬಬಲೇಶ್ವರ ತಾಲೂಕಿನ 5600 ಎಕರೆ ಭೂಸ್ವಾಧೀನವಾಗುತ್ತಿದ್ದು, 49 ಗ್ರಾಮಗಳಿಗೆ ಅಂದಾಜು ರೂ. 3000 ಕೋ. ಪರಿಹಾರ ಪಾವತಿ ಸಂದರ್ಭದಲ್ಲಿ ಕನಿಷ್ಠ 1000 ಎಕರೆಗೆ ಸರಾಸರಿ ರೂ. 500 ಕೋ. ಪರಿಹಾರ ಮೀಸಲಿಡಲು ಕೇಳಿದ್ದೇನೆ. ಅಲ್ಲದೇ, ಈಗಾಗಲೇ 11(1) ಪ್ರಾಥಮಿಕ ಅಧಿಸೂಚನೆ ಜಾರಿಯಾಗಿ ನಾನಾ ಹಂತಗಳಲ್ಲಿರುವ ಶಿರಬೂರ, ಕಣಬೂರ, ಚಿಕ್ಕಗಲಗಲಿ ಮತ್ತು ಬಾಕಿ ಉಳಿದ 10 ಗ್ರಾಮಗಳಿಗೂ ಸಹ 11(1) ಅಧಿಸೂಚನೆ ಜಾರಿ ಮಾಡಲು ಸರಕಾರ ಮುಂದಾಗಿದೆ ಎಂದು ಅವರು ತಿಳಿಸಿದರು.

ಯುಕೆಪಿ 3ನೇ ಹಂತದ ಜಾರಿಗೆ ಹಿಂದೆಯೂ ಕೆಲಸ ಮಾಡಿದ್ದೇನೆ. ಈಗಲೂ ಮಾಡುತ್ತಿದ್ದೇನೆ. ಯೋಜನೆ ಪೂರ್ಣಗೊಳ್ಳುವವರೆಗೂ ಕಾರ್ಯೋನ್ಮುಖನಾಗಿರುತ್ತೇನೆ ಎಂದು ಸಚಿವ ಎಂ. ಬಿ. ಪಾಟೀಲ ರೈತರಿಗೆ ಅಭಯ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಹೋರಾಟ ಸಮಿತಿ ಮುಖಂಡರಾದ ಅದೃಶ್ಯಪ್ಪ, ರಾಜೇಂದ್ರ ದೇಸಾಯಿ ಹಾಗೂ ಶಂಕರಗೌಡ ಪಾಟೀಲ ಶಿರಬೂರ ಆದಷ್ಟು ಬೇಗ ಸಂತ್ರಸ್ತರ ಸಮಸ್ಯೆಗಳಿಗೆ ಸ್ಪಂದಿಸಿ ಪರಿಹಾರ ಒದಗಿಸುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮುಖಂಡರಾದ ಮುತ್ತು ದೇಸಾಯಿ, ವಿ. ಎಚ್. ಬಿದರಿ, ಜೀರಗಾಳ ವಕೀಲರು, ಕೆ. ಸಿ. ದೇಸಾಯಿ, ಅಶೋಕ ಮಲಘಾಣ, ಕುಮಾರ ದೇಸಾಯಿ, ರಾಮಚಂದ್ರ ಕೊಡಬಾಗಿ, ಬಿ. ಡಿ. ಪಾಟೀಲ, ಬಿ. ಆರ್. ದೇಸಾಯಿ, ಗಿರೀಶ ಪಾಟೀಲ, ಕೆ. ಬಿ. ಪಾಟೀಲ, ಎಲ್. ಎಚ್. ಜಿಗದಾಣಿ, ಪಾಂಡಪ್ಪ ಬಿರಾದಾರ ಹೊಸೂರ, ಎಂ. ಎಚ್. ಪಾಟೀಲ ಲಿಂಗದಳ್ಳಿ, ಸಂಗನಗೌಡ ಪಾಟೀಲ, ವಿಠ್ಠಲ ಶೆಬಾನಿ, ಹನಮಂತ ಕತ್ತಿ, ಶ್ರೀಶೈಲ ಸುಳ್ಳದ, ಹನಮಂತ ಹಂಚಿನಾಳ, ಶ್ರೀನಿವಾಸ ನಿಡೋಣಿ, ರಮೇಶ ಯರಗಟ್ಟಿ ಹೊಸೂರು, ಹನಮಂತ ಚೊಳಪ್ಪಗೋಳ ಮುಂತಾದವರು ಉಪಸ್ಥಿತರಿದ್ದರು.

## ನಂದಿ ಸಹಕಾರಿ ಸಕ್ಕರೆ ಕಾರ್ಖಾನೆ ಪುನಶ್ಚೇತನಕ್ಕೆ ಬದ್ಧ

ನಂದಿ ಸಹಕಾರಿ ಸಕ್ಕರೆ ಕಾರ್ಖಾನೆ ಈ ಭಾಗದ ಅಸ್ಮಿತೆಯಾಗಿದ್ದು, ಸಂಕಷ್ಟದಲ್ಲಿರುವ ಕಾರ್ಖಾನೆಯ ಉಳಿವಿಗಾಗಿ ವಿಶೇಷ ನೆರವು ನೀಡುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗಿದೆ. ಅಲ್ಲದೇ, ಇಂಧನ ಸಚಿವ ಕೆ. ಜೆ. ಜಾರ್ಜ್ ಅವರೊಂದಿ ಚರ್ಚಿಸಿ ಕೆ.ಇ.ಆರ್.ಸಿ ಕಾಯಿದೆ ತಿದ್ದುಪಡಿ ತರಲು ಕ್ರಮ ಕೈಗೊಂಡಿದ್ದೇನೆ. ಈ ಕಾರ್ಖಾನೆಯ ಪುನಶ್ಚೇತನಕ್ಕೆ ಬದ್ಧನಾಗಿದ್ದೇನೆ ಎಂದು ಸಚಿವ ಎಂ. ಬಿ. ಪಾಟೀಲ ತಿಳಿಸಿದರು.

# ಜು.3 ರಂದು ದಲಿತರ ಹಕ್ಕೊತ್ತಾಯ ಮಂಡಿಸಲು ಜನಾಗ್ರಹ ಸಮಾವೇಶ



■ ಉದಯರಶ್ಮಿ ದಿನಪತ್ರಿಕೆ

ಆಲಮೇಲ: ಕರ್ನಾಟಕ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್ ವಾದ) ಜನಾಗ್ರಹ ಸಮಾವೇಶ ಹಮ್ಮಿಕೊಂಡಿದ್ದು ಈ ಸಮಾವೇಶವು ದಲಿತರ ಭೂಮಿ, ವಸತಿ, ಬ್ಯಾಕ್‌ಲಾಗ್ ಉದ್ಯೋಗ ನೇಮಕಾತಿ, ವಿಶೇಷ ಘಟಕ ಯೋಜನೆ ಏಕಗವಾಕ್ಷಿ ನೀತಿಗಾಗಿ ಹಕ್ಕೊತ್ತಾಯಿಸಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಜುಲೈ 3 ರಂದು ಬೃಹತ್ ಸಮಾವೇಶ ನಡೆಯಲಿದೆ. ಎಂದು ಬೆಳಗಾವ ವಿಭಾಗ ಸಂಚಾಲಕ ಸಂಜು ಕೆಂಬಾವಿ ಹೇಳಿದರು.

ಅವರು ಮಂಗಳವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಆಲಮೇಲ ತಾಲೂಕಿನ ನೂತನ ಸಂಘಟನೆ ಪ್ರಾರಂಭಿಸಿ, ಪದಾದಿಕಾರಿಗಳ ನೇಮಕ ಮಾಡಿ, ನಂತರ ಜುಲೈ 3 ರಂದು ನಡೆಯುವ ಸಮಾವೇಶದ ಕುರಿತು ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡುತ್ತ ಹೇಳಿದರು.

ರಾಜ್ಯ ಸರ್ಕಾರ ದಲಿತರ ಅಭಿವೃದ್ಧಿಗೆ ಮಿಸಲಿರುವ ಎಸ್.ಸಿ.ಎಸ್.ಪಿ / ಟಿ.ಎಸ್.ಪಿ ಹಣವನ್ನು ಗ್ಯಾರೇಂಟಿ ಯೋಜನೆಗೆ ಬಳಕೆ ಮಾಡಿಕೊಳ್ಳುತ್ತಿದ್ದು ಇದನ್ನು ವಿರೋಧಿ ಸರ್ಕಾರಕ್ಕೆ ಮನವರಿಕೆ ಮಾಡಿ ದಲಿತರಿಗೆ ಮಿಸಾಲಿರುವ ಹಣವನ್ನು ದಲಿತರಿಗಾಗಿಗೆಯೇ ಬಳಕೆ ಮಾಡುವಂತೆ ಹೋರಾಟದ ಮೂಲಕ ಸರ್ಕಾರಕ್ಕೆ ಹಾಕ್ಕೋತ್ತಾಯ ಮಂಡಿಸಲಿದ್ದೇವೆ ಎಂದು ಹೇಳಿದರು.

ದಲಿತ ಮುಖಂಡರಾದ ದತ್ತಾತ್ರೆಯ ಆಲಮೇಲ್ಕರ, ಸಂತೋಷ ಬಾಸ್ಕರ, ಶಿವು ಮೇಲಿ ಮನಿ, ಶಶಿಧರ ನಾಯಕೋಡಿ, ನವಿನ ವಗ್ಗಿ, ಸಂಜು ಇಟಗಾರ, ಬಸೀರ ತಾಂಬೋಳಿ, ಸಾಯಬಣ್ಣ ದಳಪತಿ, ಸುರೇಶ ನಾಟೀಕಾರ, ರಾಜು ಮೇತ್ರಿ ಸೇ–ರಿದಂತೆ ಅನೇಕರು ಇದ್ದರು.

ಕರ್ನಾಟಕ ದಲಿತ ಸಂಘರ್ಷ ಸಮಿತಿಯ (ಅಂಬೇಡ್ಕರ್ ವಾದ) ಸಂಘಟನೆಯ ನೂತನ ಪದಾಧಿಕಾರಿಗಳು ಪ್ರಧಾನ ಸಂಚಾಲಕ ಶಶಿಧರ ನಾಯ್ಕೋಡಿ, ಸಂಘಟನಾ ಸಂಚಾಲಕ ಸಂಜು ಇಟಗಾರ, ಸದಸ್ಯರಾಗಿ ಹುಚ್ಚಪ್ಪ ಸೀಮಗೆ, ಪುಂಡಲಿಕ ಗುಂದಗಿ, ಸುರೇಶ ನಾಟೀಕರ, ಮಾದವರಾವ ಕಡಣಿ, ದಾವಲಮಲಿಕ ದೇವರಮನಿ, ಖಾಜು ಐರೋಡಗಿ ರಾಜು ಸಿಂಗೆ, ಅಲ್ಪ ಸಂಖ್ಯಾತರ ಘಟಕದ ಬಸೀರ ತಾಂಬೋಳಿ, ಆಲಮೇಲ ನಗರ ಘಟಕದಿಂದ ರಾಜು ಮೇತ್ರಿ, ಶರಣು ಬಿಳಂಬಗಿ, ಪ್ರಕಾಶ ಬ್ಯಾಕೋಡ ಇವರನ್ನು ನೇಮಕ ಮಾಡಲಾಯಿತು.

# ನಿಷ್ಠೆಯಿಂದ ಕೆಲಸ ಮಾಡಿದರೆ ಯಶಸ್ಸು ಖಚಿತ : ಶಾಸಕ ಮನಗೂಳಿ



■ ಉದಯರಶ್ಮಿ ದಿನಪತ್ರಿಕೆ

ಆಲಮೇಲ: ಯಾವುದೇ ಕೆಲಸ ಕಷ್ಟದಿಂದ ಮಾಡುವ ಬದಲಿಗೆ ಇಷ್ಟಪಟ್ಟು ನಿಷ್ಠೆಯಿಂದ ಕೆಲಸ ಮಾಡಿದರೆ ಯಶಸ್ವಿ ಆಗುವುದು ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಮಂಗಳವಾರ ಪಟ್ಟಣದ ಬಸವೇಶ್ವರ ಶಾಲೆಯ ನೂತನ ಶಾಲಾ ಕಟ್ಟಡ ಉದ್ಘಾಟಿಸಿ ಮಾತನಾಡುತ್ತಾ ಹೇಳಿದರು.

ಯಾವುದೇ ಕೆಲಸವಿರಲಿ ಗೌರವದಿಂದ ಮಾಡಬೇಕು ಅದು ಯೋಗ್ಯ. ಖಾಸಗಿ ಶಿಕ್ಷಣ ಸಂಸ್ಥೆಗಳು ನಡೆಸಿಕೊಂಡು ಹೋಗುವುದು ಕಷ್ಟದ ಕೆಲಸವಾಗಿದೆ. ಗ್ರಾಮೀಣ ಭಾಗದ ಬಡಜನರ ಮಕ್ಕಳ ವಿದ್ಯಾಭ್ಯಾಸಕ್ಕೆ ಅನುಕೂಲಕ್ಕಾಗಿ ಇಂಥ ಶಿಕ್ಷಣ ಸಂಸ್ಥೆಗಳು ಬೆಳೆಯಬೇಕಾಗಿದೆ. ಅದಕ್ಕಾಗಿ ಈ ಬಸವೇಶ್ವರ ಶಾಲೆಗೆ ಸಮಾಜ ಕಲ್ಯಾಣ ಇಲಾಖೆಯಿಂದ 50 ಲಕ್ಷ ರೂಪಾಯಿ ಅನುದಾನ ಕೊಡಿಸಲಾಗಿದೆ. ಅನುದಾನ ಪಡೆದುಕೊಂಡು ಉತ್ತಮ ಸುಸಜ್ಜಿತ ಶಾಲಾ ಕಟ್ಟಡ ನಿರ್ಮಿಸಿದ್ದು ಈ ಸಂಸ್ಥೆ ಬಡ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವಂಥ–ಾಗಲಿ ಎಂದು ಹೇಳಿದರು.

ಮಾಜಿ ಶಾಸಕ ರಮೇಶ್ ಭೂಸನೂರ, ಸಾನಿಧ್ಯ ವಹಿಸಿದ ಶಂಕ್ರಾನಂದ ಮಹಾರಾಜರು, ಸಂಸ್ಥೆಯ ಅಧ್ಯಕ್ಷ ವಿಜಯಕುಮಾರ ಎಂಟುಮಾನ ಮುಂತಾದವರು ಮಾತನಾಡಿದರು.

ಸಿಂದಗಿಯ ಧಮ್ಮ ವಿಜಯ ಯುದ್ಧ ಬಿಹಾರದ ಪೂಜ್ಯಂತೆ ಸಂಘಪಾಲ ಸಾನಿಧ್ಯ ವಹಿಸಿದ್ದರು. ಮಾಜಿ ಜಿ.ಪಂ. ಸದಸ್ಯ ಸಿದ್ದುಗೌಡ ಪಾಟೀಲ, ರಾಜಶೇಖರ ಕೂಚಬಾಳ, ಸಿ.ಎಂ. ಬಂಡಗಾರ, ಸಂತೋಷಕುಮಾರ ಬೀಳಗಿ ಸಾಧಿಕ ಸುಂಬಡ, ಯಶವಂತರೇಗೌಡ ರೋಗಿ, ಬಸವರಾಜ ಬಾಗೇವಾಡಿ, ಅಶೋಕ್ ಕೊಳಾರಿ, ಸುರೇಶ ಹಳ್ಳೂರ, ಪ್ರದೀಪ ಗೌರ, ಸಂಸ್ಥೆಯ ಉಪಾಧ್ಯಕ್ಷ ಗುಂಡು ಮೇಲಿನಮನಿ, ಶಿವಾನಂದ ಜಗತಿ, ಬಸವರಾಜ, ಗುಂದಗಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಎಂ. ಎಸ್. ಚೌಧರಿ, ಬಸವರಾಜ ಹೂಗಾರ, ದತ್ತುಸಿಂಗ ರಜಪೂತ, ಶಿವಾನಂದ್ ಹಷ್ಟಗಿ, ಅಪ್ಪು ಶೆಟ್ಟಿ, ದಾದಾ ಯಲಗಾರ, ಮುಖ್ಯ ಶಿಕ್ಷಕ ಅನಂತ ಪಾಟೀಲ, ಆಡಳಿತ ಅಧಿಕಾರಿ ಅಜಿತ ಇನಾಮದ, ಮುಂತಾದವರು ಇದ್ದರು.

ಶಿಕ್ಷಕ ಮಲಿಕ್ ಮುಲ್ಲಾ ಸ್ವಾಗತಿಸಿ ವಂದಿಸಿದರು.

# ಕುಮಸಗಿ ಶಾಲಾ ಸಂಸತ್ತು ರಚನೆ



■ ಉದಯರಶ್ಮಿ ದಿನಪತ್ರಿಕೆ

ಆಲಮೇಲ: ತಾಲೂಕಿನ ಕುಮಸಗಿಯ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 2026 27ನೇ ಸಾಲಿನ ವಿದ್ಯಾರ್ಥಿಗಳಿಗೆ ಸಂಸತ್ತು ಚುನಾವಣೆ ಮತದಾನ ಮತ ಎಣಿಕೆ ಕುರಿತು ಪ್ರತೀಕ್ಷಿತ ನಡೆಯಿತು

ಶಾಲೆಯಲ್ಲಿ ಮಿನಿ ಸಂಸತ್ತು ರಚಿಸುವ ಕಾರ್ಯಕ್ರಮ ಏರ್ಪಡಾಗಿತ್ತು. ಮೊಬೈಲ್ ಮತಯಂತ್ರವನ್ನು ಡೌನ್ಲೋಡ್ ಮಾಡಿಕೊಂಡು ಅಭ್ಯರ್ಥಿಗಳ ಹೆಸರು ಮತ್ತು ಭಾವಚಿತ್ರ ಸಹಿತ ಮತಯಂತ್ರದ ಸಹಾಯದಿಂದ ವಿದ್ಯಾರ್ಥಿಗಳು ಮೊಬೈಲಿನಲ್ಲಿ ಮತದಾನ ಮಾಡುವುದು ಮೊಬೈಲಿನಲ್ಲಿ ಮತ ಎಣಿಕೆ ಮಾಡಿದರೆ ಮಾಡಿದ್ದು ಶಿಕ್ಷಕರು ಮಕ್ಕಳಿಗೆ ಹೊಸ ಅನುಭವ ನೀಡಿತು. ಮನಸಾರೆ ವಿದ್ಯಾರ್ಥಿಗಳು ಸರದಿ ಸಾಲಿನಲ್ಲಿ ಬಂದು ಮತದಾನ ಮಾಡಿದ್ದು ಚುನಾವಣೆಯ ನೆನಪು ಮರುಕಳಿಸುವಂತೆ ಮಾಡಿತು.

ವಿದ್ಯಾರ್ಥಿಗಳಿಗೆ ಮೊದಲು ಚುನಾವಣೆ ಜನ ಪ್ರತಿನಿಧಿಯ ಆಯ್ಕೆ ಪ್ರಕ್ರಿಯೆ, ಮತಯಂತ್ರ ಮತದಾನ, ಮತಗಳ ಏಣಿಕೆ ತಿರಸ್ಕಾರವಾಗುವುದು, ಅದರ ಪದ್ಧತಿಗಳೇನು? ಮತ ಎಣಿಕೆ ಹಾಗೂ ಅಭ್ಯರ್ಥಿಗಳ ಘೋಷಣೆಗಳ ಕುರಿತು ಸವಿಸ್ತಾರವಾಗಿ ಶಾಲೆಯ ಮುಖ್ಯ ಗುರು ಪರಮೇಶ್ವರಯ್ಯ ಹಿರೇಮಠ್ ವಿವರಿಸಿದರು.

ನಂತರ ಚುನಾವಣೆಗೆ ಶಾಲೆಯ ಶಿಕ್ಷಕ ವರ್ಗ ಸಿದ್ಧತೆ ಮಾಡಿಕೊಂಡಿತ್ತು. ಚುನಾವಣೆಯಲ್ಲಿ ಶಾಲೆಯ ಸಹ ಶಿಕ್ಷಕರಾದ ಎಸ್ ಎಸ್ ಭಜಂತ್ರಿ, ಎಂ ಜಿ ಮೇಧಿ, ಎನ್ ಬಿ ನಾಯ್ಕೋಡಿ, ಶ್ರೀಮತಿ ಸವಿತಾ ಆರ್, ಶಿವಶರಣಪ್ಪ ಡಾಂಗಿ, ಎಸ್ ಪಿ ತಡಸ್, ಜಿ ಜಿ ಸಜ್ಜನ್, ಆರ್ ಬಿ ಕುಡುಗನೂರ, ಶ್ರೀಮತಿ ಪವಿತ್ರ ಎಂ, ಕುಮಾರಿ ಪೂಜಿತ ಆರ್ ಟಿ, ಅತಿಥಿ ಶಿಕ್ಷಕರಾದ ಪ್ರದೀಪ್ ದೊಡ್ಡಮನಿ, ಚನ್ನಬಸು ದೊಡ್ಡಮನಿ, ಪ್ರೇಮ ನಾಲ್ಕುಮಾನ ಭಾಗವಹಿಸಿದ್ದರು.

# ಮಕ್ಕಳು ಮಾದಕ ವ್ಯಸನದಿಂದ ದೂರ ಇರಬೇಕು : ಘಾಟಗೆ

■ ಉದಯರಶ್ಮಿ ದಿನಪತ್ರಿಕೆ



ಜಮಖಂಡಿ: ಮಕ್ಕಳು ಮಾದಕ ವ್ಯಸನದಿಂದ ದೂರ ಇರುವುದರ ಜೊತೆಗೆ ಸುತ್ತಮುತ್ತಲಿನ ಜನರಲ್ಲಿ ಅದರ ಕುರಿತು ಜಾಗೃತಿ ಮೂಡಿಸಿ ಆರೋಗ್ಯವಂತ ಸಮಾಜ ನಿರ್ಮಾಣ ಮಾಡಬೇಕು ಎಂದು ಪೋಲಿಸ್ ಅಧಿಕಾರಿ ಪಿ.ಎಚ್.ಘಾಟಗೆ ಅಭಿಪ್ರಾಯ ಪಟ್ಟರು.

ಹತ್ತಿರದ ಕುಂಬಾರಹಳ್ಳ ಪಿ.ಎ. ಶ್ರೀ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ನಡೆಸಿದ ಮಾದಕ ವ್ಯಸನ ವಿರೋಧಿ ಮತ್ತು ಜಾಗೃತಿ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಮಾತನಾಡುತ್ತಾ ಇಂದು ಯುವ ಜನತೆ ಡ್ರಗ್ಸ, ಗಾಂಜಾ, ಬಿಡಿ , ಸಿಗರೇಟ್, ಮಾವಾ ಇವೇ ಮೊದಲಾದ ಮಾದಕ ವ್ಯಸನಕ್ಕೆ ಬಲಿಯಾಗಿ ಜೀವನವನ್ನು ಹಾಳು ಮಾಡಿ ಕೊಳ್ಳುತ್ತಿದ್ದಾರೆ, ಒಮ್ಮೆ ಚಟಕ್ಕೆ ಬಿದ್ದರೆ ಅದ–ರಿಂದ ತಪ್ಪಿಸಿ ಕೊಳ್ಳುವುದು ಬಹಳ ಕಷ್ಟ ಆದ್ದರಿಂದ ಮಾದಕವ್ಯಸನಗಳಿಂದ ದೂರವಿರಿ ಎಂದು ಕಿವಿಮಾತು ಹೇಳಿದರು. ನಿಮ್ಮ ಸುತ್ತಮುತ್ತಲು ಯಾರಾದರೂ ಮಾದಕ ವ್ಯಸನಕ್ಕೆ ಬಲಿಯಾದರೆ ನಾವು ನೀಡುವ ಆ್ಯಪ ಮೂಲಕ ನಮಗೆ ತಿಳಿಸಿದರೆ ಅವರನ್ನೂ ಸಹ ಸನ್ಮಾರ್ಗಕ್ಕೆ ತರಲು ಸಾಧ್ಯ ಎಂದು ಹೇಳಿ ಸ್ಕ್ಯಾನರ್ ನ್ನು ಪರಿಚಯಿಸಿ ಶಾಲೆಯಲ್ಲಿ ಎಲ್ಲರಿಗೂ ಸಿಗುವಂತೆ ಪ್ರದರ್ಶಿಸಲು ತಿಳಿಸಿದರು. ಮಕ್ಕಳ ಸಮಸ್ಯೆಗಳಿಗೆ ಪೋಲಿಸ್ ಇಲಾಖೆ ಸದಾ ಸ್ಪಂದಿಸುತ್ತದೆ ನಿಮ್ಮ ಸಮಸ್ಯೆಗಳಿದ್ದರೆ 1098ಕ್ಕೆ ದೂರವಾಣಿ ಮಾಡಿ ಮತ್ತು ಇನ್ನಿತರ ಸಮಸ್ಯೆಗಳಾದಲ್ಲಿ, ನಮ್ಮ ಸಹಾಯ ಬೇಕಾದಲ್ಲಿ 112ಕ್ಕೆ ಸಂಪರ್ಕಿಸಿ ಎಂದು ಹೇಳಿದರು.

ಮುಖ್ಯೋಪಾಧ್ಯಾಯ ನಾರಾಯಣ ಶಾಸ್ತ್ರಿ ಮಾತನಾಡಿ "ಮನುಷ್ಯ ಅರಿಯದೇ ಆಕರ್ಷಣೆಗೆ ಒಳಗಾಗಿ ಚಟ ಮಾಡುತ್ತಾನೆ, ನಂತರ ಚಟವೇ ಚಟ ಮಾಡುತ್ತದೆ ಕೊನೆಗೆ ಚಟ ಮಾನವನನ್ನೇ ಬಲಿ ಪಡೆದುಕೊಳ್ಳುತ್ತದೆ ಆದ್ದರಿಂದ ಮಾದಕದ್ರವ್ಯದಿಂದ ದೂರವಿರಿ ಮತ್ತು ಅದಕ್ಕೆ ಒಳಗಾದವರನ್ನು ರಕ್ಷಿಸುವ ಪಣ ತೊಡಿ ಎಂದರು.

ಶಿಕ್ಷಕ ಬಾಹುಬಲಿ ಮುತ್ತೂರ ಪ್ರಾಸ್ತಾವಿಕವಾಗಿ ಮಾತನಾಡಿ, ಮಾದಕ ವಸ್ತುಗಳು ನಮ್ಮ ಜೀವನವನ್ನೇ ಹಾಳು ಮಾಡುತ್ತದೆ ಆದ್ದರಿಂದ ವಿದ್ಯಾರ್ಥಿಗಳು ಜಾಗೃತಿಯಿಂದ ಬಾಳಬೇಕು ಎಂದರು.

ಆರಕ್ಷಕ ಎಸ್.ಪಿ.ಮಠಪತಿ, ಶಿಕ್ಷಕರಾದ ಅಶೋಕ ಬಿರಾದಾರ ಪಾಟೀಲ, ಚಂದ್ರಕಾಂತ ಪೋಲಿಸ್, ಶ್ರೀಮತಿ ಶಾರದಾ ಮಠ, ಮಂಜುಳಾ ಕಡಕೋಳ, ಆಸೀಫಾಬಾನು ಮೋಮಿನ್, ಶಕುಂತಲಾ ಬಿರಾದಾರ ಮತ್ತು ಶಾಲೆಯ ಎಲ್ಲಾ ಮಕ್ಕಳು ಉಪಸ್ಥಿತರಿದ್ದರು. ಕಾರ್ಯಕ್ರಮದ ಕೊನೆಯಲ್ಲಿ ಮಕ್ಕಳು ಮಾದಕವ್ಯಸನ ವಿರೋಧಿ ಪ್ರತಿಜ್ಞೆಯನ್ನು ಸ್ವೀಕರಿಸಿದರು. ಬಾಹುಬಲಿ ಮುತ್ತೂರ ಗುರುಗಳು ಕಾರ್ಯಕ್ರಮವನ್ನು ನಿರೂಪಿಸಿ ವಂದಿಸಿದರು.

# ಅನೀಮಿಯಾ ಮುಕ್ತ ಭಾರತಕ್ಕೆ ಕೈಜೋಡಿಸಿದ ಐ.ಆರ್.ಡಿ. & ಸ್ಪಂದನ ಸಂಸ್ಥೆ

## ಸಂಸ್ಥೆಗಳ ಕಾರ್ಯ ಶ್ಲಾಘಿಸಿದ ವಿಜಯಪುರ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಶಿವಾನಂದ ಮಾಸ್ತಿಹೊಳಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಅನೀಮಿಯಾ ಮುಕ್ತ ಭಾರತ ಹಾಗೂ ಅನೀಮಿಯಾ ಮುಕ್ತ ಕರ್ನಾಟಕ ಅಭಿಯಾನಕ್ಕೆ ಕೈಜೋಡಿಸಿ ರಾಜ್ಯಾದ್ಯಂತ ಜನಜಾಗೃತಿ, ತಪಾಸಣೆ ಹಾಗೂ ಉಚಿತ ಔಷಧಿ ವಿತರಣೆಯ ಮೂಲಕ ಮಹತ್ವದ ಸೇವೆ ಸಲ್ಲಿಸುತ್ತಿರುವ ಗ್ರಾಮೀಣ ಅಭಿವೃದ್ಧಿ ಸಂಸ್ಥೆ (ಐ.ಆರ್.ಡಿ.) ಮತ್ತು ಸ್ಪಂದನ ಸ್ವಯಂ ಸೇವಾ ಸಂಸ್ಥೆಗಳ ಕಾರ್ಯ ಶ್ಲಾಘನೀಯವಾಗಿದೆ ಎಂದು ಜಿಲ್ಲಾ ಆಸ್ಪತ್ರೆ ವಿಜಯಪುರದ ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ. ಶಿವಾನಂದ ಮಾಸ್ತಿಹೊಳಿ ಹೇಳಿದರು.

ಮಂಗಳವಾರ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಐ.ಆರ್.ಡಿ ಮತ್ತು ಸ್ಪಂದನ ಸೇವಾ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ತೆರೆಯಲಾದ ಉಚಿತ ಅನೀಮಿಯಾ ಅರಿವು, ರಕ್ತಹೀನತೆ ತಪಾಸಣೆ ಹಾಗೂ ಔಷಧಿ ವಿತರಣಾ ಕೇಂದ್ರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಅನೀಮಿಯಾ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿದ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಬಾಬು ಜಿ. ಸಜ್ಜನ ಹಾಗೂ ಸ್ಪಂದನ ಸಂಸ್ಥೆಯ ಅಧ್ಯಕ್ಷ ಮಹಾದೇವ ದೇವರ ಅವರ ನೇತೃತ್ವದಲ್ಲಿ ಜಿಲ್ಲೆಯ ತಾಳಿಕೋಟೆ ತಾಲೂಕಿನ ಮಿಣಜಗಿ ಗ್ರಾಮದಲ್ಲಿ ಪ್ರಾಯೋಗಿಕವಾಗಿ 577 ಶಾಲಾ ಮಕ್ಕಳ ರಕ್ತಹೀನತೆ ತಪಾಸಣೆ ನಡೆಸಲಾಗಿತ್ತು. ಈ ವೇಳೆ ಶೇ.38 ರಷ್ಟು ಮಕ್ಕಳು ಅನೀಮಿಯಾದಿಂದ ಬಳಲುತ್ತಿರುವುದು ಪತ್ತೆಯಾಗಿತ್ತು. ಈ ಅನುಭವದ ಆಧಾರದ ಮೇಲೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ಅನೀಮಿಯಾ ತಡೆ ಮತ್ತು ಜಾಗೃತಿ ಕಾರ್ಯಕ್ರಮವನ್ನು ವಿಸ್ತರಿಸಲಾಯಿತು. ಗುಜರಾತಿನ ಶ್ರೀಮದ್ ರಾಜಚಂದ್ರ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರವು ಆರ್ಥಿಕ ಸಹಕಾರ ನೀಡಿದ್ದು, ಕನ್ನೂರಿನ ಗ್ರಾಮ ಸುರಾಜ್ಯ ಸಂಸ್ಥೆಯೂ ಬೆಂಬಲ ನೀಡಿದೆ. ರಾಜ್ಯದ 23 ಜಿಲ್ಲೆಗಳಲ್ಲಿ 28 ಸ್ವಯಂಸೇವಾ ಸಂಸ್ಥೆಗಳ ಮೂಲಕ ಕಾರ್ಯಕ್ರಮ ಅನುಷ್ಠಾನಗೊಳ್ಳುತ್ತಿದ್ದು, ಎರಡು ವರ್ಷ ಮೇಲ್ಪಟ್ಟ ಮಕ್ಕಳಿಂದ ಹಿಡಿದು ಎಲ್ಲಾ ವರ್ಗದ ಜನರಿಗೆ ಉಚಿತ ಅನೀಮಿಯಾ ತಪಾಸಣೆ, ಔಷಧಿ ವಿತರಣೆ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ವಿವರಿಸಿದರು.

ಇಲ್ಲಿಯವರೆಗೆ ರಾಜ್ಯದಲ್ಲಿ 15.50 ಲಕ್ಷಕ್ಕೂ ಹೆಚ್ಚು ಜನರಿಗೆ ರಕ್ತಹೀನತೆ ಪರೀಕ್ಷೆ ನಡೆಸಿ ಉಚಿತ ಔಷಧಿ ವಿತ–ರಿಸಲಾಗಿದೆ. ಜಿಲ್ಲೆಯಲ್ಲಿ ಮಾತ್ರ 1.06 ಲಕ್ಷಕ್ಕೂ ಅಧಿಕ ಜನ–ರಿಗೆ ಉಚಿತ ತಪಾಸಣೆ ನಡೆಸಲಾಗಿದೆ. ತಪಾಸಣೆಯಲ್ಲಿ ಜಿಲ್ಲೆಯ ಸುಮಾರು ಶೇ.40 ರಷ್ಟು ಜನರಲ್ಲಿ ವಿವಿಧ ಹಂತದ ರಕ್ತಹೀನತೆ ಕಂಡುಬಂದಿದೆ ಎಂದರು.

ಮಕ್ಕಳಿಗೆ ಪೂರಕ ಪೌಷ್ಠಿಕ ಸಿರಪ್‌ಗಳು, ಎಲ್ಲಾ ವಯೋಮಾನದವರಿಗೆ ಜಂತಿನಾಶಕ ಔಷಧಿಗಳು ಹಾಗೂ ಕಬ್ಬಿಣಾಂಶದ ಮಾತ್ರೆಗಳನ್ನು ಉಚಿತವಾಗಿ ವಿತ–ರಿಸಲಾಗುತ್ತಿದೆ ಎಂದರು.

ಡಾ. ಬಾಬು ಜಿ. ಸಜ್ಜನ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಗ್ರಾಮೀಣ ಅಭಿವೃದ್ಧಿ ಸಂಸ್ಥೆ, ಎಂ.ಎಸ್. ದೇವರ, ಮಾತನಾಡಿ, ಸಶಕ್ತ ಭಾರತ ನಿರ್ಮಾಣಕ್ಕೆ ಆರೋಗ್ಯವಂತ ಮಕ್ಕಳ ಅಗತ್ಯವಿದೆ. ಅನಾರೋಗ್ಯಕರ ಆಹಾರ ಪದ್ಧತಿಗಳ ಪರಿಣಾಮ ಮಕ್ಕಳಲ್ಲಿ ಅನೀಮಿಯಾ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಉಚಿತ ತಪಾಸಣೆ, ಜಾಗೃತಿ ಹಾಗೂ ಪೂರಕ ಔಷಧಿ ವಿತರಣೆಯ ಮೂಲಕ ರಾಜ್ಯಾದ್ಯಂತ ಸೇವೆ ಸಲ್ಲಿಸಲಾಗುತ್ತಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಅಧಿಕಾರಿ, ಸಿಬ್ಬಂದಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದರು ಎಂದು ಪ್ರಕಟಣೆ ತಿಳಿಸಿದೆ.

# ಡಾ. ಬಿ.ಆರ್.ಅಂಬೇಡ್ಕರ್ ಹೆಸರು ದುರ್ಬಳಕೆ ತಡೆಗೆ ಎಸ್ಪಿಗೆ ಮನವಿ

■ ಉದಯರಶ್ಮಿ ದಿನಪತ್ರಿಕೆ



ಎಚ್.ಡಿ.ಕೋಟೆ: ದಲಿತ ಸಂಘರ್ಷ ಸಮಿತಿಯ ಹೆಸರಿನಲ್ಲಿ ಕೆಲವರು ದುಡ್ಡು ಮಾಡುತ್ತಿದ್ದಾರೆ. ಇಲಾಖೆಗಳಲ್ಲಿ ಮಧ್ಯ ಪ್ರವೇಶಿಸಿ ಹಣಗಳಿಸುವ ದಂಧೆ ಮಾಡಿಕೊಂಡಿದ್ದಾರೆ. ಜೊತೆಗೆ ಸಿವಿಲ್ ಪ್ರಕರಣಗಳಲ್ಲಿ ಮೂಗು ತೂರಿಸುತ್ತಿದ್ದಾರೆ. ಇಂತವರ ವಿರುದ್ಧ ಪೊಲೀಸ್ ಇಲಾಖೆ ನಿಗಾವಹಿಸಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಕಾನೂನು ಸುವ್ಯವಸ್ಥೆ ಮೇಲೆ ಪರಿಣಾಮ ಬೀರಲಿದೆ ಎಂದು ದಲಿತ ಸಮುದಾಯದ ಕೆಲವರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿಗೆ ಮನವಿ ಮಾಡಿದರು.

ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ನಡೆದ ಹೆಚ್.ಡಿ.ಕೋಟೆ, ಸರಗೂರು ಹಾಗೂ ಅಂತರಸಂತೆ ಪೊಲೀಸ್ ಠಾಣೆಗಳ ವ್ಯಾಪ್ತಿಯ ಸಾರ್ವಜನಿಕರ ಅಹವಾಲು ಸ್ವೀಕಾರ ಸಭೆಯಲ್ಲಿ ಹಲವು, ಸಲಹೆ, ಸೂಚನೆ, ದೂರುಗಳು ಕೇಳಿಬಂದವು.

ಶಾಲಾ, ಕಾಲೇಜು ಸಮಯಗಳಲ್ಲಿ ಪುಂಡರು ಅತೀ ವೇಗ, ಎಕ್ಸಲೇಟರ್ ಶಬ್ದ ಹೆಚ್ಚಿಸಿಕೊಂಡು ಬೈಕ್ ಚಲಾಯಿಸುತ್ತಾರೆ. ಗದ್ದಿಗೆ ಸರ್ಕಲ್ ಪುಂಡ, ಪೋಕರಿಗಳ ಅಡ್ಡೆಯಾಗಿ ಮಾರ್ಪಟ್ಟಿದೆ. ಶಾಲಾ, ಕಾಲೇಜಿಗೆ ಮಕ್ಕಳು ಹೋಗುವ, ಬರುವ ಸಮಯ ಬ್ಯಾರಿಕೇಡ್ ಅಳವಡಿಸಿ ಸಂಚಾರ ದಟ್ಟಣೆ, ಅತೀ ವೇಗದ ಚಾಲನೆ ನಿಯಂತ್ರಿಸಬೇಕು. ಹೌಸಿಂಗ್ ಬೋರ್ಡ್, ಸ್ಟೇಡಿಯಂ, ಕನಕ ಭವನದ ಹಿಂದಿನ ನೂತನ ಬಡಾವಣೆಗಳು ಅಪರಾಧ ಕೃತ್ಯಗಳ ತಾಣಗಳಾಗಿ ಮಾರ್ಪಡಾಗುತ್ತಿವೆ. ಆದಿಚುಂಚನಗಿರಿ ಶಾಲೆ ಬಳಿ ಇರುವ ಹಂಪ್ ನಿಂದ ದ್ವಿ–ಚಕ್ರ ವಾಹನ ಸವಾರರು ಬಿದ್ದು ಗಾಯಗೊಳ್ಳುತ್ತಿರುವ ಘಟನೆಗಳು ಮರುಕಳಿಸುತ್ತಿವೆ. ಇಲ್ಲಿ ಜೀಬ್ರಾ ಕ್ರಾಸಿಂಗ್ ಅಳವಡಿಕೆ, 0.5ಮೀ ಅಂತರದಲ್ಲಿ ಹಂಪ್ ಇರುವ ಬಗ್ಗೆ ಸೂಚನಾ ಫಲಕ ಅಳವಡಿಸಬೇಕು ಎಂದು ಜೀವಿಕ ಸಂಘಟನೆ ಜಿಲ್ಲಾ ಸಂಚಾಲಕ ಉಮೇಶ್ ಸಲಹೆ ನೀಡಿದರು.

ಕೆಲ ಸಾರ್ವಜನಿಕರ ಅಸಮಾಧಾನ ತಾಲೂಕಿನಿಂದ ಸರಗೂರನ್ನು ಬೇರ್ಪಡಿಸಿ ನೂತನ ತಾಲೂಕು ಎಂದು ಸರ್ಕಾರ ಘೋಷಿಸಿದೆ. ಯಾವುದೇ ಸಭೆ, ಸಮಾರಂಭ ನಡೆದರೂ ಕೋಟೆಯಲ್ಲಿಯೇ ಮಾಡುತ್ತೀರಿ. ಅಧಿಕಾ–ರಿಗಳು ಸರಗೂರನ್ನು ಕಡೆಗಣಿಸಿದ್ದೀರಿ ಆದ್ದರಿಂದ ನಾವು ಸಭೆ ಬಹಿಷ್ಕರಿಸಿ ಹೊರ ನಡೆಯುತ್ತೇವೆ ಎಂದು ಕೆಲವರು ಸಭೆ ಆರಂಭದಲ್ಲಿ ಆಕ್ಷೇಪ ವ್ಯಕ್ತಪಡಿಸಿದರು. ಮುಂದಿನ ದಿನಗಳಲ್ಲಿ ದಿನಾಂಕ ನಿಗದಿ ಮಾಡಿ ಸರಗೂರಿನಲ್ಲೂ ಸಭೆ ಮಾಡಲಾಗುವುದು ಎಂದು ನಾಗೇಶ್ ತಿಳಿಸಿದ ನಂತರ, ಸಭೆ ಆರಂಭವಾಯಿತು.

ಸರಗೂರಿನ ಕೃಷ್ಣ, ಮಹಿಳಾ ಆಪ್ತ ಸಮಾಲೋಚಕಿ ಜಶೀಲಾ ಪೊಲೀಸ್ ಇಲಾಖೆ ಸಿಬ್ಬಂದಿಗಳ ಕಾರ್ಯವೈಖ–ರಿಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಪತ್ರಕರ್ತ ಬಸವರಾಜು ಮಾತನಾಡಿದರು.

ಅಪರ ಪೊಲೀಸ್ ವರಿಷ್ಠಧಿಕಾರಿ ನಾಗೇಶ್, ಡಿವೈ–ಎಸ್ಪಿ ರವಿ, ಆರಕ್ಷಕ ವೃತ್ತ ನಿರೀಕ್ಷಕರಾದ ಗಂಗಾಧರ್, ಪ್ರಸನ್ನ ಕುಮಾರ್, ಸಬ್ ಇನ್ಸ್ ಪೆಕ್ಟರ್ ಗಳಾದ ಕಿರಣ್, ಚಂದ್ರಹಾಸ, ಸುರೇಶ್ ನಾಯಕ, ಗೋಪಾಲ್, ತಹಶೀಲ್ದಾರ್ ಗಳಾದ ಮೋಹನ ಕುಮಾರಿ, ಶ್ರೀನಿವಾಸ್, ತಾ.ಪಂ ಕಾರ್ಯನಿರ್ವಹಣಾಧಿಕಾರಿ ಪ್ರೇಮ್ ಕುಮಾರ್, ಪುರಸಭೆ ಮುಖ್ಯಾಧಿಕಾರಿ ಪಿ.ಸುರೇಶ್ ಸೇರಿದಂತೆ ಹಲವು ಇಲಾಖೆಗಳ ಅಧಿಕಾರಿಗಳು, ನೌಕರರು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಇದ್ದರು.

# ದೈವಾನುಗ್ರಹ ಮಾತೆ ಮಹಾದೇವಾಲಯದ ವಾರ್ಷಿಕ ಮಹೋತ್ಸವ ಭಕ್ತಿಭಾವದಿಂದ ಸಂಪನ್ನ

ಕಲಬುರಗಿ: ನಗರದ ಸೇಂಟ್ ಮೇರಿ ಚರ್ಚ್ ವ್ಯಾಪ್ತಿಯ ದೈವಾನುಗ್ರಹ ಮಾತೆ ಮಹಾದೇವಾಲಯದ ವಾರ್ಷಿಕ ಮಹೋತ್ಸವವನ್ನು ಬಾನುವಾರ್ ಭಕ್ತಿಪೂರ್ವಕ ಹಾಗೂ ವಿಜೃಂಭಣೆಯಿಂದ ಆಚರಿಸಲಾಯಿತು.

ಮಹೋತ್ಸವದ ಅಂಗವಾಗಿ ಮುಂಜಾನೆ 4.30 ಗಂಟೆಗೆ ಜಪಸರ ಕಾರ್ಯಕ್ರಮ ಆರಂಭಗೊಂಡು, ಬಳಿಕ ದಿವ್ಯ ಬಲಿ ಪೂಜೆ ನೆರವೇರಿಸಲಾಯಿತು. ಈ ಪೂಜೆಯನ್ನು ಕಲಬುರಗಿ ಧರ್ಮಪ್ರಾಂತ್ಯದ ಧರ್ಮಾಧ್ಯಕ್ಷರಾದ ಪೂಜ್ಯ ರಾಬರ್ಟ್ ಮೈಕಲ್ ಮಿರಾಂಡಾ ಅವರು ನೆರವೇರಿಸಿದರು.

ಕಾರ್ಯಕ್ರಮದಲ್ಲಿ ಅತಿ ವಂದನೀಯ ಫಾದರ್ ಸಂತೋಷ್ ಬಾಪು, ದೈವಾನುಗ್ರಹ ಮಾತೆ ಮಹಾದೇವಾಲಯದ ಪ್ರಧಾನ ಗುರುಗಳಾದ ಫಾದರ್ ಜೋಸೆಫ್ ಪ್ರವೀಣ್, ಸಹಾಯಕ ಗುರುಗಳಾದ ಫಾದರ್ ರೆನಾಲ್ಡ್, ಡಾನ್ ಬಾಸ್ಕೋ ಸಂಸ್ಥೆಯ ಗುರುಗಳು, ಜಸ್ವಿತ್ ಫಾದರ್ಸ್, ಕಡಗಂಚಿಯ ಕಾರ್ಮೆಲೈಟ್ ಗುರುಗಳು ಸೇರಿದಂತೆ ವಿವಿಧ ಕ್ರೈಸ್ತ ಧರ್ಮಕೇಂದ್ರಗಳಿಂದ ಆಗಮಿಸಿದ್ದ ಗುರುಗಳು ಹಾಗೂ ಕನ್ಯಾ ಭಗಿನಿಯರು ಭಾಗವಹಿಸಿದ್ದರು.

ದಿವ್ಯ ಬಲಿ ಪೂಜೆಯ ನಂತರ ಮೇರಿ ಮಾತೆಯ ತೇರಿಗೆ ಧರ್ಮಾಧ್ಯಕ್ಷರು ಆಶೀರ್ವಾದ ನೀಡಿದರು. ಬಳಿಕ ಮೇರಿ ಮಾತೆಯ ಭವ್ಯ ತೇರಿನ ಮೆರವಣಿಗೆ ಸೇಂಟ್ ಮೇರಿ ಚರ್ಚನಿಂದ ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತದವರೆಗೆ ಸಾಗಿತು. ಈ ಸಂದರ್ಭದಲ್ಲಿ ಫಾದರ್ ಸಂತೋಷ್ ಬಾಪು ಅವರು ಮಾತೆ ಮ–ರಿಯಮ್ಮನವರ ಮಹತ್ವ ಹಾಗೂ ಕ್ರೈಸ್ತ ಭಕ್ತರ ವಿಶ್ವಾಸದ ಸಂಕೇತಗಳ ಕುರಿತು ಸಂದೇಶ ನೀಡಿದರು.ನಂತರ ಮೆರವಣಿಗೆ ಮರಳಿ ಸೇಂಟ್ ಮೇರಿ ಚರ್ಚ್ ತಲುಪಿದ್ದು, ಅಲ್ಲಿ ವಿಶೇಷ ಆರಾಧನೆ ನೆರವೇರಿಸಲಾಯಿತು.

ಮಹೋತ್ಸವದ ಸಮಾರೋಪದ ಅಂಗವಾಗಿ ದೇವಾಲಯದ ಮುಂಭಾಗದಲ್ಲಿದ್ದ ಧ್ವಜವನ್ನು ಇಳಿಸಿ, ಅದನ್ನು ಉಪಾಧ್ಯಕ್ಷರಾದ ಡಾ. ಕಿರಣ್ ಜಾರ್ಜ್ ಅವರಿಗೆ ಗುರುಗಳ ನೇತೃತ್ವದಲ್ಲಿ ಹಸ್ತಾಂತರಿಸಲಾಯಿತು.

ಕಾರ್ಯಕ್ರಮದ ಅಂತ್ಯದಲ್ಲಿ ಆಗಮಿಸಿದ್ದ ಸಾವಿರಾರು ಭಕ್ತಾದಿಗಳಿಗೆ ಅನ್ನಸಂತರ್ಪಣೆಯ ವ್ಯವಸ್ಥೆ ಮಾಡಲಾಗಿತ್ತು. ಮಹೋತ್ಸವದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಭಾಗವಹಿಸಿ ಧಾರ್ಮಿಕ ವಿಧಿವಿಧಾನಗಳಲ್ಲಿ ಪಾಲ್ಗೊಂಡರು

# ಸನ್ಮಾನಕ್ಕೆ ಮೊದಲ ಮೆಟ್ಟಿಲು ಅವಮಾನ!

■ ಉದಯರಶ್ಮಿ ದಿನಪತ್ರಿಕೆ

## ಜಯ್ ನುಡಿ
## (ವ್ಯಕ್ತಿತ್ವ ವಿಕಸನ ಕುರಿತ ಲೇಖನ ಮಾಲಿಕೆ)



ಭಾರತೀಯ ಕ್ರಿಕೆಟ್ ಕಂಡ ಶ್ರೇಷ್ಠ ಬೌಲರ್ ಅನಿಲ ಕುಂಬ್ಳೆ ಅವರ ವೃತ್ತಿ ಜೀವನದ ಆರಂಭದಲ್ಲಿ ವಿಮರ್ಶಕ–ರಿಂದ ಭಾರಿ ಟೀಕೆ ವ್ಯಕ್ತವಾಗಿತ್ತು. ಅವರು ಸಾಂಪ್ರದಾಯಿಕ ಸ್ಪಿನ್ನರ್‌ಗಳಂತೆ ಚೆಂಡನ್ನು ಹೆಚ್ಚು ಟರ್ನ್ ಮಾಡುವುದಿಲ್ಲ ಹೀಗಾಗಿ ಅವರು ಅಂತರರಾಷ್ಟ್ರೀಯ ಮಟ್ಟದಲ್ಲಿ ಯಶಸ್ವಿಯಾಗಲು ಸಾಧ್ಯವೇ ಇಲ್ಲ ಎಂದು ಮಾಧ್ಯಮಗಳಲ್ಲಿ ಮತ್ತು ಕ್ರಿಕೆಟ್ ವಲಯದಲ್ಲಿ ಬಹಿರಂಗವಾಗಿ ಅವಮಾನಿಸಲಾಗಿತ್ತು. ಟೀಕೆಗಳಿಗೆ ಅನಿಲ ಕುಂಬ್ಳೆ ಮೈದಾನದಲ್ಲಾಗಲಿ ಹೊರಗಾಗಲಿ ಎಂದೂ ಜಗಳವಾಡಲಿಲ್ಲ. ಬದಲಿಗೆ ತಮ್ಮದೇ ಆದ ವಿಶಿಷ್ಟ ಶೈಲಿಯಲ್ಲಿ ನಿಖರ ಬೌಲಿಂಗ್ ದಾಳಿ ನಡೆಸಿ ಪಾಕಿಸ್ತಾನದ ವಿರುದ್ಧ ಒಂದೇ ಇನ್ನಿಂಗ್ಸ್‌ನಲ್ಲಿ 10 ವಿಕೆಟ್ ಪಡೆದು ಇತಿಹಾಸ ನಿರ್ಮಿಸಿದರು. ಭಾರತದ ಪರ ಅತಿ ಹೆಚ್ಚು ವಿಕೆಟ್ ಪಡೆದ ಜಾಗತಿ–ಕ ದಂತಕಥೆಯಾಗಿ ವಿಮರ್ಶಕರ ಬಾಯಿ ಮುಚ್ಚಿಸಿದರು. 'ಬಿದ್ದಾಗ ನಗುವವರ ಸಂಖ್ಯೆ ಹೆಚ್ಚಿರಬಹುದು. ಆದರೆ ಗೆದ್ದಾಗ ಚಪ್ಪಾಳೆ ತಟ್ಟುವ ಜಗತ್ತು ಇದೇ ಆಗಿದೆ.' ಆದ್ದರಿಂದ ದೃತಿಗೆಡದೇ ಮುನ್ನಡೆಯಬೇಕು.

ಹಾಗಾದರೆ ಗೆಲುವಿನ ಹಾದಿಯಲ್ಲಿ ಎದುರಾಗುವ ಅವಮಾನವನ್ನು ಮೆಟ್ಟಿ ನಿಲ್ಲುವ ಬಗೆ ಹೇಗೆ? ಎಂಬ ಪ್ರಶ್ನೆಗೆ ಉತ್ತರವಾಗಿ ಇಲ್ಲಿವೆ ಕೆಲವು ಸಲಹೆಗಳು.

### ದೃಷ್ಟಿ

ಹೋದಲೆಲ್ಲ ನಮ್ಮನ್ನು ರೆಡ್ ಕಾರ್ಪೆಟ್ ಹಾಕಿ ಸ್ವಾಗತಿಸುವುದಿಲ್ಲ. ಹಾಗೆಯೇ ಯಾವಾಗಲೂ ಗೆಲುವು ನಮ್ಮೊಂದಿಗೆ ಬರುವುದಿಲ್ಲ. ನಾವಂದುಕೊಂಡ ಕೆಲಸಗಳು ನಿಗದಿತ ಸಮಯಕ್ಕೆ ಆಗದಿರುವ ಸಮಯದಲ್ಲೂ ಅವಮಾನ



ಉಂಟಾಗಬಹುದು. ಕೆಲವು ಸಮಯದಲ್ಲಿ ನಮ್ಮದೇನೂ ತಪ್ಪು ಇಲ್ಲದಿದ್ದರೂ ಅವಮಾನ ಅನುಭವಿಸಬೇಕಾಗುತ್ತದೆ. ಬೇರೆಯವರ ದೃಷ್ಟಿಯಲ್ಲಿ ಸಣ್ಣವರಾಗಿ ಕಾಣುತ್ತೇವೆ. ಅದು ನಮ್ಮನ್ನು ಒಮ್ಮೊಮ್ಮೆ ಖಿನ್ನತೆಗೆ ಕೂಡ ತಳ್ಳಬಹುದು. ಖಿನ್ನತೆಗೆ ಒಳಗಾಗಿ ಆತ್ಮಹತ್ಯೆಯಂತಹ ತಪ್ಪು ನಿರ್ಧಾರಗಳನ್ನು



ತೆಗೆದುಕೊಳ್ಳಬಾರದು. ಇತರರ ದೃಷ್ಟಿಯನ್ನು ಬಿಟ್ಟು ನಿಮ್ಮ ದೃಷ್ಟಿಯಲ್ಲಿ ನೋಡಬೇಕು. ಅವಮಾನಿಸಿದವರ ದೃಷ್ಟಿ ಸರಿಯಾಗಿದ್ದರೆ ತಿದ್ದಿಕೊಳ್ಳಬೇಕು. ನಿಮ್ಮ ಗುರಿ ಮತ್ತು ನೀವು ಹೋಗುವ ದಾರಿ ಸರಿಯಿದ್ದರೆ ಸಾಕು ಅವಮಾನಗಳಿಗೆ ಹೆದರುವ ಅಗತ್ಯವಿಲ್ಲ. 'ಜಗತ್ತು ನಿಮ್ಮನ್ನು ಹೇಗೆ ನೋಡುತ್ತದೆ ಮುಖ್ಯವಲ್ಲ, ನಿಮ್ಮ ಗುರಿಯ ಮೇಲೆ ನಿಮಗಿರುವ ದೃಷ್ಟಿ ಮತ್ತು ಕಠಿಣ ಪರಿಶ್ರಮ ಮಾತ್ರ ನಿಮ್ಮ ಭವಿಷ್ಯವನ್ನು ಬದಲಾಯಿಸಬಲ್ಲದು.'

### ಬೇಡ ಕೋಪ

ಅವಮಾನ ಅನುಭವಿಸಿದ ಬಹಳಷ್ಟು ಸಂದರ್ಭದಲ್ಲಿ ಕೋಪ ನೆತ್ತಿಗೇರುತ್ತದೆ. ನಾನು ಆ ಅವಮಾನಕ್ಕೆ ಯೋಗ್ಯನಲ್ಲ ಎಂದು ಜೋರಾಗಿ ಚೀರಿ ಹೇಳಬೇಕೆನಿಸುತ್ತದೆ. ಆದರೆ ಆ ಕೂಗಾಟ ಬೆಂಕಿಗೆ ತುಪ್ಪ ಸು–ರಿದಂತೆ ಮತ್ತಷ್ಟು ಅವಮಾನ ಹೆಚ್ಚಿಸುತ್ತದೆ. 'ಕೋಪವು ಬುದ್ಧಿಯನ್ನು ನಾಶಪಡಿಸುತ್ತದೆ. ಮೌನವು ಎದುರಾಳಿಯನ್ನು ಯೋಚಿಸುವಂತೆ ಮಾಡುತ್ತದೆ.' ಅವಮಾನಕ್ಕೆ ಜಗಳವಾಡುವುದಾಗಲಿ ಇಲ್ಲವೇ ಕೋಪದಿಂದ ಕಿರುಚಾಡುವುದಾಗಲಿ ಉತ್ತರವಲ್ಲ. ಅವಮಾನ ಎಂಬುದು ನಮ್ಮ ಯೋಗ್ಯತೆಯನ್ನಾಗಲಿ, ನಮ್ಮ ಬದುಕಿನ ಭವ್ಯ ಭವಿಷ್ಯವನ್ನಾಗಲಿ ನಿರ್ಧರಿಸುವುದಿಲ್ಲ ಎಂಬುದನ್ನು ಚೆನ್ನಾಗಿ ನೆನಪಿಡಬೇಕು.

### ಮೌನ ವಹಿಸಿ

ದುಡುಕಿ ಪ್ರತ್ಯುತ್ತರ ನೀಡುವುದೂ ಸರಿಯಲ್ಲ. ಅವಮಾನವಾದ ಕ್ಷಣದಲ್ಲಿ ಕೆಲ ಕಾಲ ಮೌನವಾಗಿರುವುದು ಒಳಿತು. ಮೌನವಾಗಿ ಇದ್ದರೆ ಅದು ನಮ್ಮ ದೌರ್ಬಲ್ಯವನ್ನು ತೋರಿಸುತ್ತದೆ ಎಂದು ಎಷ್ಟೋ ಸಲ ಅವಮಾನ ಮಾಡಿದವರಿಗೆ ಪ್ರತಿಕ್ರಿಯೆ ನೀಡಲು ಮುಂದಾಗುತ್ತೇವೆ. ನಾವು ಕೊಟ್ಟ ಪ್ರತಿಕ್ರಿಯೆ ಅವರ ಆಟಕ್ಕೆ ಬೆಲೆ ಕೊಟ್ಟಂತಾಗುತ್ತದೆ. ಅವಮಾನಕ್ಕೆ ಮೌನದಿಂದ ಉತ್ತರಿಸುವುದು ಉತ್ತಮ ಮಾರ್ಗವಾಗಿರುತ್ತದೆ. ಮೌನವಾಗಿದ್ದರೆ ಅವಮಾನಿಸಿದವರ ಅಹಂಕಾರವೂ ತಗ್ಗುತ್ತದೆ. ಮೌನ ತಾತ್ಕಾಲಿಕ ಪರಿಹಾರವಲ್ಲ. ಅದು ನಮಗೆ ಆಂತರಿಕ ಶಕ್ತಿಯನ್ನೂ ನೀಡುತ್ತದೆ ಎಂಬುದನ್ನು ಮರೆಯುವಂತಿಲ್ಲ. ಅವಮಾನಗಳಿಗೆ ಮಾತಿನಲ್ಲಿ ಉತ್ತರ ನೀಡುವುದಕ್ಕಿಂತ ನಮ್ಮ ಸಾಧನೆಯ ಮೂಲಕ ಉತ್ತರ ನೀಡುವುದು ಅತ್ಯಂತ ಪರಿಣಾಮಕಾರಿ ಮಾರ್ಗ. ನಿಮ್ಮನ್ನು ಕೀಳಾಗಿ ಕಂಡವರ ಮುಂದೆ ಎಂದಿಗೂ ವಾದ ಮಾಡಬೇಡಿ. ನಿಮ್ಮ ಮೌನ ಕಠಿಣ ಪರಿಶ್ರಮವಾಗಿ ಬದಲಾಗಲಿ. ನಿಮ್ಮ ಯಶಸ್ಸು ಅವರಿಗೆ ಉತ್ತರಿಸಲಿ.



### ಸ್ವೀಕರಿಸಿ


ಹೊಡೆದ ಕಲ್ಲುಗಳಿಂದಲೇ ಕೋಟೆ ಕಟ್ಟಿಕೊಳ್ಳಿ ಎಂಬ ಮಾತಿನಂತೆ ಅವಮಾನಗಳಿಂದಲೇ ಸನ್ಮಾನದ ದಾ–ರಿಯಲ್ಲಿ ಭದ್ರ ಕೋಟೆ ಕಟ್ಟಿಕೊಳ್ಳಬೇಕು. ನಮ್ಮ ಗೆಲುವೇ ನಮ್ಮನ್ನು ಅವಮಾನಿಸಿದವರಿಗೆ ನೀಡುವ ಅತಿ ದೊಡ್ಡ ಶಿಕ್ಷೆ. ಅವಮಾನ ಯಾವಾಗಲೂ ನಿಂದೆಗಳಿಂದಲೇ ಕೂಡಿರುತ್ತದೆ ಅಂತೇನಿಲ್ಲ. ಕೆಲವೊಮ್ಮೆ ಆ ಅವಮಾನದ ಹಿಂದಿನ ಮಾತುಗಳಲ್ಲಿ ಸತ್ಯವೂ ಅಡಗಿರಬಹುದು. ಹಾಗಿದ್ದ ಸಮಯದಲ್ಲಿ ಅವಮಾನವನ್ನು ಸಕಾರಾತ್ಮಕವಾಗಿ ಸ್ವೀಕರಿಸಬೇಕು. ಸ್ವಾಮಿ ವಿವೇಕಾನಂದರು ಹೇಳಿದಂತೆ 'ಯಾರೋ ಎಸೆದ ಕಲ್ಲುಗಳನ್ನು ನೋಡಿ ಕುಗ್ಗಬೇಡಿ. ಆ ಕಲ್ಲುಗಳನ್ನೇ ಬಳಸಿ ಯಶಸ್ಸಿನ ಭದ್ರ ಬುನಾದಿ ನಿರ್ಮಿಸಿಕೊಳ್ಳಿ.' ಅವಮಾನವನ್ನು ನಾವು ಹೇಗೆ ಸ್ವೀಕರಿಸುತ್ತೇವೆ ಮತ್ತು ಅದಕ್ಕೆ ಹೇಗೆ ಪ್ರತಿಕ್ರಿಯಿಸುತ್ತೇವೆ ಎಂಬುದರ ಮೇಲೆ ನಮ್ಮ ಬದುಕಿನ ಯಶೋಮಾರ್ಗ ಆದ–ಾರಿತವಾಗಿರುತ್ತದೆ. ಎಂಬುದನ್ನು ಸ್ಪಷ್ಟವಾಗಿ ತಿಳಿದುಕೊಳ್ಳಬೇಕು.

### ಕುಗ್ಗದಿರಿ

'ಅವಮಾನ ಎಂಬುದು ಕಹಿ ಕಷಾಯವಿದ್ದಂತೆ. ಅದನ್ನು ಕುಡಿದು ಕುಗ್ಗಬೇಡಿ. ಅದನ್ನೇ ನಿಮ್ಮ ಯಶಸ್ಸಿನ ಇಂಧನವಾಗಿಸಿಕೊಳ್ಳಿ.' ಅವಮಾನದ ಒಲೆಯಲ್ಲಿ ಬೆಂದು ಸಿದ್ಧರಾದವರು ಚಿನ್ನದಂತೆ ಹೊಳೆಯುತ್ತಾರೆ. ಯಾರೋ ನಿಮ್ಮನ್ನು ಅವಮಾನಿಸಿದರು ಎಂದಮಾತ್ರಕ್ಕೆ ನೀವು ಅಯೋಗ್ಯರು ಎಂದಲ್ಲ ಅಸಮರ್ಥ–ರ್ರು ಎಂದಲ್ಲ ಕೆಟ್ಟವರು ಎಂತಲೂ ಅರ್ಥವಲ್ಲ. ಇತರರ ಮಾತುಗಳು ನಿಮ್ಮ ಯೋಗ್ಯತೆಯನ್ನು ನಿರ್ಧರಿಸುವುದಿಲ್ಲ, ನೀವು ನಿರ್ಧರಿಸಲು ಬಿಡಬಾರದು. ಬಂಗಾರವನ್ನು ಕಸದಲ್ಲಿ ಎಸೆದ ತಕ್ಷಣ ಅದರ ಬೆಲೆ ಕಡಿಮೆ ಆಗುವುದಿಲ್ಲ. ನೀವು ಯಾರು ನಿಮ್ಮ ಸಾಮರ್ಥ್ಯವೇನು ನಿಮ್ಮ ದೌರ್ಬಲ್ಯವೇನು ಎಂಬುದು ನಿಮಗಿಂತ ಚೆನ್ನಾಗಿ ಬೇರೆ ಯಾರಿಗೂ ತಿಳಿಯುವುದಿಲ್ಲ. ನಿಮ್ಮ ಮೇಲಿನ ನಂಬಿಕೆಯನ್ನು ಎಂದಿಗೂ ಕಳೆದುಕೊಳ್ಳಬೇಡಿ. ನಿಮ್ಮ ಮೇಲೆ ನಿಮಗೆ ನಂಬಿಕೆ ಇದ್ದರೆ ಅಸಾಧ್ಯವಾದುದನ್ನು ಸಾಧ್ಯವಾಗಿಸಬಲ್ಲಿರಿ.

### ಗಮನ ಹರಿಸಿ

ಅ ವ ' ವ ' ಾ ನ ' ನಮ್ಮನ್ನು ಅಧೋಗತಿಗೆ ಇಳಿಸಲು ಬರುವುದಿಲ್ಲ. ಅವುಗಳು ನಮ್ಮನ್ನು ಪ್ರಗತಿಯ ದಾ–ರಿಯತ್ತ ಕರೆದೊಯ್ಯಲು ಬರುತ್ತವೆ. ಅವು ಎಚ್ಚರಿಸಲು ಬರುವ ಅಲಾರಾಂ ಎಂದು ತಿಳಿಯಬೇಕು. ಅವಮಾನಿಸಿದವರ ಬಗೆಗೆ ಹೆಚ್ಚು ತಲೆ ಕೆಡಿಸಿಕೊಳ್ಳುತ್ತ ಕುಳಿತರೆ ಅತ್ಯಮೂಲ್ಯ ಸಮಯ ವ್ಯರ್ಥವಾಗುವುದು. ಆ ಸಮಯ ಮತ್ತೆಂದು ಮರಳಿ ಬಾರದು. ಆದ್ದರಿಂದ ನಿಮ್ಮ ಗುರಿಯ ಕಡೆಗೆ ನಿಮ್ಮ ಗಮನ ಹರಿಸಿ. ಕೆಲವೊಮ್ಮೆ ಅವಮಾನದ ಹಿಂದೆ ಸತ್ಯ ಇರಬಹುದು. ಆಗ ನಮ್ಮಲ್ಲಿರುವ ತಪ್ಪುಗಳನ್ನು ತಿದ್ದಿಕೊಳ್ಳಲು ಅದು ಉತ್ತಮ ಅವಕಾಶವೆಂದು ಭಾವಿಸಬೇಕು. ತಪ್ಪುಗಳನ್ನು ಒಪ್ಪಿಕೊಂಡು ತಿದ್ದಿಕೊಳ್ಳಬೇಕು. ಮುಂದೆ ಸಾಗಬೇಕು. ಹಗಲಿರುಳೆನ್ನದೇ ಗುರಿಯತ್ತ ಗಮನ ಹರಿಸಿ. ಯಶಸ್ಸು ಗಳಿಸಿ.




ನಿಮ್ಮ ಯಶಸ್ಸೆ ನಿಮ್ಮನ್ನು ಅವಮಾನಿಸಿದವ–ರಿಗೆ ಸಿಗುವ ಅತಿ ದೊಡ್ಡ ಪ್ರತಿಕಾರ.

### ಕೊನೆ ಹನಿ

ನಮಗೆ ಆಗುವ ಪ್ರತಿಯೊಂದು ಅವಮಾನವೂ ಭವಿಷ್ಯದ ದೊಡ್ಡ ಗೌರವಕ್ಕೆ ದಾರಿಯಾಗುತ್ತದೆ. ಎಲ್ಲ ಸಾಧಕರು ಅವಮಾನವನ್ನು ಎದುರಿಸಿದವರೆ. ನಿಮ್ಮನ್ನು ನೋಡಿ ನಗುವವರ ಮುಂದೆ ನೀವು ನಗುತ್ತಾ ಯಶಸ್ವಿಯಾಗಿ ಬಾಳಿ ತೋರಿಸುವುದೇ. ನೀವು ಅವರಿಗೆ ಕೊಡುವ ಅತ್ಯಂತ ದೊಡ್ಡ ಶಿಕ್ಷೆ. 'ಜಗತ್ತು ನಿನ್ನನ್ನು ಸೋಲಿಸಲು ಬಯಸಿದರೆ ನೀನು ಗೆದ್ದು ತೋರಿಸು. ಜಗತ್ತು ನಿನ್ನನ್ನು ಕೀಳಾಗಿ ನೋಡಿದರೆ, ನೀನು ಎತ್ತರಕ್ಕೆ ಬೆಳೆದು ತೋರಿಸು.' ಅವಮಾನಕ್ಕೆ ತಲೆ ತಗ್ಗಿಸಿ ಕುಳಿತರೆ ಬದುಕು ಹಳಿ ತಪ್ಪಿ ಹೋಗುತ್ತದೆ. ಅವಮಾನಕ್ಕೆ ಕುಗ್ಗಿ ಹೋಗದೆ ಅದನ್ನು ಮೆಟ್ಟಿ ನಿಲ್ಲಬೇಕು. 'ಅವಮಾನವೇ ಸನ್ಮಾನಕ್ಕೆ ಮೊದಲ ಮೆಟ್ಟಿಲು' ಜೀವನದಲ್ಲಿ ಮುಳ್ಳಿನಂತೆ ಚುಚ್ಚುವ ಅವಮಾನಗಳನ್ನು ಸಹಿಸಿಕೊಂಡು, ಅವುಗಳನ್ನೇ ಮೆಟ್ಟಿಲುಗಳನ್ನಾಗಿ ಮಾಡಿಕೊಳ್ಳಬೇಕು. ಆಗ ಅವಮಾನಿಸಿದವರೆ ಮಣೆ ಹಾಕಿ ಸನ್ಮಾನ ಮಾಡುವ ಸಂಭ್ರಮದ ಗಳಿಗೆ ಸ್ವಾಗತಿಸುತ್ತದೆ.

ಲೇಖನ
– ಜಯಶ್ರೀ.ಜೆ. ಅಬ್ಬಿಗೇರಿ,
ಇಂಗ್ಲೀಷ್ ಉಪನ್ಯಾಸಕರು
ಬೆಳಗಾವಿ
ಮೊ: 9449234142



# ಎನ್ ಎಸ್ ಎಸ್ ಶಿಬಿರ ನಾಯಕತ್ವ ಗುಣ ರೂಪಿಸುತ್ತದೆ: ಅಟ್ಟೂರ

ಕಲಬುರಗಿ:ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಜವಾಬ್ದಾರಿ, ನಾಯಕತ್ವ ಗುಣ, ಶಿಸ್ತು ಮತ್ತು ಸೇವಾ ಮನೋಭಾವವನ್ನು ಬೆಳೆಸುವುದೆ ರಾಷ್ಟ್ರೀಯ ಸೇವಾ ಯೋಜನೆ ಉದ್ದೇಶವಾಗಿದೆ ಎಂದು ಜನಪರ ಹೋರಾಟಗಾರ, ನ್ಯಾಯವಾದಿ ಹಣಮಂತರಾಯ ಅಟ್ಟೂರ ಹೇಳಿದರು.

ಶ್ರೀ ಹಿಂಗೂಲಾಂಬಿಕ ಶಿಕ್ಷಣ ಸಂಸ್ಥೆ ಹಾಗೂ ಗುಲ್ಬರ್ಗ ವಿಶ್ವವಿದ್ಯಾಲಯ ಸಂಯುಕ್ತ ಆಶ್ರಯದಲ್ಲಿ ಶ್ರೀ ಹಿಂಗುಲಾಂಬಿಕಾ ಕಾಲೇಜಿನ ಆವರಣದಲ್ಲಿ ರಾಷ್ಟ್ರೀಯ ಸ್ವಯಂ ಸೇವಕರ ಸಮಾರೋಪ ಸಮಾರಂಭ ಉದ್ಘಾಟಿಸಿ ಮಾತನಾಡುತ್ತ ಗ್ರಾಮೀಣ ಅಭಿವೃದ್ಧಿ, ಸ್ವಚ್ಛತೆ, ಪರಿಸರ ಸಂರಕ್ಷಣೆ, ರಕ್ತದಾನ, ಆರೋಗ್ಯ ಜಾಗೃತಿ ಹಾಗೂ ಸಾಕ್ಷರತಾ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಮೂಲಕ ಸಮಾಜದ ಅಭಿವೃದ್ಧಿಗೆ ಕೊಡುಗೆ ನೀಡುತ್ತಾರೆ. ವಿದ್ಯಾರ್ಥಿಗಳಿಗೆ ಸಮಾಜದ ಸಮಸ್ಯೆಗಳನ್ನು ಅರ್ಥಮಾಡಿಕೊಳ್ಳಲು ಹಾಗೂ ಅವುಗಳ ಪರಿಹಾರಕ್ಕಾಗಿ ಕಾರ್ಯನಿರ್ವಹಿಸಲು ಅವಕಾಶ ಒದಗಿಸುತ್ತದೆ.ನಾಯಕತ್ವದ ಗುಣ ಬೆಳೆಸುವರೊಂದಿಗೆ ಸಮೃದ್ಧ ರಾಷ್ಟ ಕಟ್ಟಬಹುದು ಎಂದು ಮಾರ್ಮಿಕವಾಗಿ ನುಡಿದರು. ಭಾಗವಹಿಸಿದರು. ಭೀಮನಗೌಡ ಮತ್ತು ಐಶ್ವರ್ಯ ನಿರೂಪಿಸಿದರು. ರಾಘವೇಂದ್ರ ಸ್ವಾಗತಿಸಿದರು. ಮೇಘ ಹೊಸಮನಿ ವಂದಿಸಿದರು.

# 'ಪುಸ್ತಕ ಮನೆ'ಯ ಅಕ್ಷರ ಯೋಗಿ-ಅಂಕೇ ಗೌಡ್ರು


■ ಉದಯರಶ್ಮಿ ದಿನಪತ್ರಿಕೆ

## ವ್ಯಕ್ತಿ - ವ್ಯಕ್ತಿತ್ವ
## (ಸಾಧಕರ ಬದುಕಿನ ಪುಟಗಳು)



ಜಾನ್ ವಾರ್ಸ್ ಅವರು, "Collect books, even if you don't plan on reading them right away. Nothing is more important than an unread library" ಎಂದು ಹೇಳಿದ್ದಾರೆ. ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳಲ್ಲಿ ಓದಿನ ಆಸಕ್ತಿ, ಹವ್ಯಾಸ ಮತ್ತು ಸಂಸ್ಕೃತಿ ಕ್ಷೀಣಿಸುತ್ತಿರುವುದು ಕಳವಳಕಾರಿ ಸಂಗತಿ. ಅದರಲ್ಲಿ ಪುಸ್ತಕ ಓದುವಿಕೆಯಂತೂ ತೀರ ವಿರಳ. ಪುಸ್ತಕ ಓದುವುದು ಎಂದರೆ ಕೇವಲ ಕಾಲಹರಣ ಮಾಡುವುದಲ್ಲ. ಅದು ನಮ್ಮ ಜ್ಞಾನ ವೃದ್ಧಿ, ವ್ಯಕ್ತಿತ್ವ ವಿಕಸನ ಮತ್ತು ವಿಷಯದ ಬಗ್ಗೆ ತಿಳಿದುಕೊಳ್ಳಬೇಕೆನ್ನುವ ಹಂಬಲವನ್ನು ಅಭಿವ್ಯಕ್ತಿಗೊಳಿಸುವ ಸಾಧನವಾಗಿದೆ. ಓದುವ ಹವ್ಯಾಸವು ನಮ್ಮಲ್ಲಿರುವ ಮಾನಸಿಕ ಒತ್ತಡವನ್ನು ಕಡಿಮೆ ಮಾಡಿ, ಮನದಲ್ಲಿ ಸೃಜನಾತ್ಮಕತೆಯು ಅರಳುವಂತೆ ಮಾಡುತ್ತದೆ. ಆದ್ದ–ರಿಂದ ಕೇವಲ 'ಮೊಬೈಲ್ ಫೋಬಿಯಾ' ಮತ್ತು ಸಮೂಹ ಮಾಧ್ಯಮಗಳ ಬೆನ್ನು ಹತ್ತಿರುವ ಯುವ ಜನಾಂಗ ಓದುವ ಸಂಸ್ಕೃತಿಯನ್ನು ಅಳವಡಿಸಿಕೊಳ್ಳುವಂತೆ ಪ್ರೇರೇಪಿಸಬೇಕಾಗಿದೆ. ಮೊಬೈಲ್ ಬಳಕೆಯಿಂದ ದೂರವಿರಿಸಿ, ಭೌತಿ–ಕ ಪುಸ್ತಕಗಳನ್ನು ಹಿಡಿಯುವ ಹವ್ಯಾಸ ರೂಢಿಸಿಕೊಳ್ಳುವಂತೆ ಪೋಷಕರು ಪ್ರೋತ್ಸಾಹಿಸಬೇಕಾಗಿರುವುದು ಇಂದಿನ ಅಗತ್ಯತೆಯಾಗಿದೆ.

ಪುಸ್ತಕ ಸಂಗ್ರಹ, ಓದಿನ ಮಹತ್ವ ಮತ್ತು ಪುಸ್ತಕದ ಮೇಲಿನ ಪ್ರೇಮದಿಂದ ವೇತನದ ಬಹುಪಾಲು



ಹಣವನ್ನು ಪುಸ್ತಕಗಳ ಖರೀದಿಗೆ ವ್ಯಯಿಸಿದ ಅಪರೂಪದ ವ್ಯಕ್ತಿತ್ವದ ಅವರು. ತಮ್ಮ ಶಾಲಾ ಜೀವನದಲ್ಲಿ ಶಾಲೆಗಳಲ್ಲಿರುವ ಪುಸ್ತಕಗಳನ್ನು ಮನೆಗೆ ಒಯ್ಯಲು ಅವಕಾಶ ಕೊಡಲಿಲ್ಲ ಎಂದು ಬೇಸರಪಟ್ಟುಕೊಂಡು, ಈ ಕಾರಣಕ್ಕೆ ಪುಸ್ತಕಗಳ ಸಂಗ್ರಹಣೆ ಮಾಡಿ, ನಾಲ್ಕು ಜನರಿಗಾದರೂ ಪುಸ್ತಕಗಳನ್ನು ಓದುವ ಅವಕಾಶ ದೊರಕಿಸಿ ಕೊಡಬೇಕೆಂಬ ಕಳಕಳಿ, ಪುಸ್ತಕಗಳ ಮೇಲಿನ ಪ್ರೀತಿ ಮತ್ತು ಸಂಗ್ರಹಣೆಯ ಪ್ರವೃತ್ತಿ ಮನದಲ್ಲಿ ಮೂಡಿತು.

ತಮ್ಮ ಸ್ವಂತ ಮನೆಯನ್ನೇ ಪುಸ್ತಕಗಳ ಖರೀದಗಾಗಿ ಮಾರಾಟ ಮಾಡಿದ ಹಾಗೂ ಗ್ರಾಮೀಣ ಭಾಗದ ಜನರ ಜ್ಞಾನದ ಹಸಿವನ್ನು ನೀಗಿಸಲು ಸುಮಾರು 20 ಲಕ್ಷಕ್ಕಿಂತಲೂ ಹೆಚ್ಚು ಪುಸಕಗಳ ಭಂಡಾರವನ್ನಾಗಿಸಿ, ತಮ್ಮ ಮನೆಯನ್ನು 'ಪುಸ್ತಕ ಮನೆ' ಯಾಗಿ ಪರಿವರ್ತಿಸಿದ ಕನ್ನಡ ಪುಸ್ತಕ ಪ್ರೇಮಿ ಅವರು. ಏನಪ್ಪ ಇವರು ಯಾರ ಬಗ್ಗೆ ಇಷ್ಟೊಂದು ಗುಣವಿಶೇಷಣದೊಂದಿಗೆ ಯಾರನ್ನು ವರ್ಣನೆ ಮಾಡುತ್ತಿದ್ದಾರೆ ಅಂದುಕೊಂಡೀರಾ? ಖಂಡಿತ ಹೌದು. ಈ ಲೇಖನದಲ್ಲಿ ನಾನು ಹೇಳೋಕೆ ಹೊರಟಿರುವುದು ಮತ್ತಾರೂ ಅಲ್ಲ. ಅವರೇ ನಮ್ಮ ಮಂಡ್ಯ ಜಿಲ್ಲೆಯ 'ಪುಸ್ತಕ ಮನೆಯ' ಯ ಅಕ್ಷರ ಲೋಕದ ತಪಸ್ವಿ ಮತ್ತು ಅಕ್ಷರ ಯೋಗಿ ಎಂದೇ ಹೆಸರುವಾಸಿಯಾದ ಎಂ ಅಂಕೇಗೌಡ್ರ ಅವರ ಬಗ್ಗೆ.ಪುಸ್ತಕಗಳು ವ್ಯಕ್ತಿಯ ಜೀವನದ ಸರ್ವಸ್ವ ಎಂಬುದನ್ನು 20 ಲಕ್ಷ ಪುಸ್ತಕ ಸಂಗ್ರಹಿಸಿ ಮೈಲಿಗಲ್ಲು ಸಾಧನೆ

ಒಂದು ಕಾಲದಲ್ಲಿ ಬಸ್ ಕಂಡಕ್ಟರ್ ಆಗಿದ್ದ ಅಂಕೇಗೌಡ್ರರು ಕನ್ನಡ ಭಾಷೆ, ಸಾಹಿತ್ಯ ಮತ್ತು ಪುಸ್ತಕಗಳ ಮೇಲಿನ ಪ್ರೇಮದಿಂದ ಪ್ರಖ್ಯಾತಿಯಾಗಿದ್ದವರು. 'ಪುಸ್ತಕಗಳು ಜೀವನದ ಸರ್ವಸ್ವ' ಎಂದೇ ಪರಿಗಣಿಸಿದ್ದ ಅವರು ಮಂಡ್ಯ ಜಿಲ್ಲೆಯ ಪಾಂಡವಪುರ ತಾಲೂಕಿನ ಹರಳಹಳ್ಳಿರುವ ತಮ್ಮ ಮನೆಯನ್ನೇ 'ಪುಸ್ತಕ ಮನೆ'



ಯನ್ನಾಗಿಸಿ ಸಾರ್ವಜನಿಕರಿಗಾಗಿ ತೆರೆದಿಟ್ಟ ಅಪರೂಪದ ಪುಸ್ತಕ ಪ್ರೇಮಿ. 20 ಭಾಷೆಗಳ ಸುಮಾರು 20 ಲಕ್ಷಕ್ಕೂ ಹೆಚ್ಚಿನ ಸಂಖ್ಯೆಯ ಪುಸ್ತಕಗಳನ್ನು ಸಂಗ್ರಹಿಸಿರುವುದು ಇವರ ಸಾಧನೆಗೆ ಹಿಡಿದ ಮೈಲಿಗಲ್ಲು ಎಂದು ಹೇಳಬಹುದು. ಪ್ರತಿಯೊಬ್ಬ ಯಶಸ್ವಿ ಪುರುಷನ ಹಿಂದೆ ಮಹಿಳೆ ಇರುತ್ತಾಳೆ ಅನ್ನೋದಕ್ಕೆ ಇವರ ಪತ್ನಿಯು ಕೂಡ ಇಂತಹ ಸಾಧನೆಗೆ ಸಾಥ ನೀಡಿರುವುದು ಇನ್ನೊಂದು ವೈಶಿಷ್ಟ್ಯತೆ. ಇವರು ಕೇವಲ ಪುಸ್ತಕಗಳ ಸಂಗ್ರಹಣೆ ಮಾತ್ರವಲ್ಲದೇ ನಾಣ್ಯ, ಅಂಚೆ ಚೀಟಿ ಮತ್ತು ಅಪರೂಪದ ಲಗ್ನಪತ್ರಿಕೆಗಳನ್ನು ಸಂಗ್ರಹಿಸುವ ಹವ್ಯಾಸ ಹೊಂದಿದ್ದು, ತಮ್ಮ ದುಡಿಮೆಯ ಅರ್ಧದಷ್ಟು ಹಣವನ್ನು ಪುಸ್ತಕಗಳ ಸಂಗ್ರಹಣೆ, ನಿರ್ವಹಣೆ ಮತ್ತು ಸಾರ್ವಜನಿಕರಲ್ಲಿ ಓದಿನ ಹವ್ಯಾಸ ಬೆಳೆಸುವುದಕ್ಕಾಗಿಯೇ ಖರ್ಚು ಮಾಡಿದ ಸಾಧಕರೆಂದರೆ ಅತಿಶಯೋಕ್ತಿಯಾಗಲಾರದು. ಇವರ ಪುಸ್ತಕ ಸಂಗ್ರಹಣೆಯ ಕನಸನ್ನು ನನಸು ಮಾಡಲು ಉದ್ಯಮಿ ಹರಿಕೋಡೆ ಅವರು ಮನೆಯೊಂದನ್ನು ನಿರ್ಮಿಸಿಕೊಟ್ಟು ಅದು ಬೃಹತ್ ಗ್ರಂಥಾಲಯವಾಗುವಂತೆ ಸಹಕಾರ ನೀಡಿದ್ದಾರೆ.

*ಬೃಹತ್ ಗ್ರಂಥಾಲಯ ಸ್ಥಾಪಿಸಿ ಓದುಗರಿಗೆ ನಿಸ್ವಾರ್ಥ ಸೇವೆ ಸಲ್ಲಿಸಿದ ಅಂಕೇ ಗೌಡ್ರ ಜೀವನ ನಮಗೆಲ್ಲ ಆದ–ರ್ಶವಾಗಲಿ: 'ಪುಸ್ತಕ ಪ್ರಪಂಚ' ವಾಗಿ



ಎಂದು ತೋರ್ಪಡುವ ಪಾಂಡವಪುರದ ಅವರ 'ಪುಸ್ತಕ ಮನೆ' ಯು ಪುಸ್ತಕ ಪ್ರೀಯರಿಗೆ, ಓದುಗರಿಗೆ ಮತ್ತು ಜ್ಞಾನದ ಹಸಿವನ್ನು ನೀಗಿಸಿಕೊಳ್ಳಬೇಕೆನ್ನುವ ಹಂಬಲ ಹೊಂದಿರುವರಿಗೆ ಕೈ ಬೀಸಿ ಕರೆಯುತ್ತದೆ. ಹಳ್ಳಿಯಲ್ಲಿ ಸಾರ್ವಜನಿಕರಿಗಾಗಿಯೇ ಉಚಿತವಾಗಿ ಓದಲು ಬೃಹತ್ ಗ್ರಂಥ–ಾಲಯ ಸ್ಥಾಪಿಸಿದ ನಿಸ್ವಾರ್ಥತೆಯ ವ್ಯಕ್ತಿ ಅಂಕೇ ಗೌಡ್ರರು. ತಮ್ಮ 50 ಕ್ಕೂ ವರ್ಷಗಳ ಸಂಪಾದನೆಯ ಬಹುಭಾಗವನ್ನು ಮತ್ತು ಸ್ವಂತ ಮನೆಯನ್ನು ಮಾರಿ, ಕನ್ನಡ, ಹಿಂದಿ, ತಮಿಳು, ರಷ್ಯನ್ ಸೇರಿದಂತೆ ವಿವಿಧ ಭಾಷೆಗಳ 20 ಲಕ್ಷಕ್ಕೂ ಹೆಚ್ಚು ಪುಸ್ತಕಗಳನ್ನು ಸಂಗ್ರಹಿಸಿದ್ದಾರೆ. ಅವರ ಈ ಪುಸ್ತಕಗಳ ಸಂಗ್ರಹಣೆಯಲ್ಲಿ ಮೈಸೂರು ಮಹಾರಾಜರ ಕಲದ ಹಸ್ತಪ್ರತಿಗಳು, ವೇದ, ಉಪನಿಷತ್ ಮತ್ತು ಮಹಾತ್ಮಾ ಗಾಂಧೀಜಿಯ ಕೃತಿಗಳು ಸೇರಿದಂತೆ ನೂರಾರು ವರ್ಷಗಳ ಹಳೆಯ ಪತ್ರಿಕೆಗಳು ಮತ್ತು ಪುಸ್ತಕಗಳು ಇಲ್ಲಿವೆ. ನಾಡಿನ ವಿದ್ಯಾರ್ಥಿಗಳು, ಸಂಶೋಧಕರು ಮತ್ತು ಸಾರ್ವಜನಿಕರಿಗೂ ಈ ಜ್ಞಾನ ಭಂಡಾರದಲ್ಲಿ ಉಚಿತವಾಗಿ ಪುಸ್ತಕಗಳು ಓದಲು ಯಾವುದೇ ಶುಲ್ಕವಿಲ್ಲದೇ ದೊರೆಯುವಂತೆ ಅವಕಾಶ ಕಲ್ಪಿಸಿಕೊಡಲಾಗಿದೆ.

### ಕೊನೆಯ ನುಡಿ

ಶ್ರೇಷ್ಠ ಪುಸ್ತಕ ಪ್ರೇಮಿ, ಸಾಹಿತ್ಯಾಸಕ್ತ ಮತ್ತು ಪುಸ್ತಕ ಪ್ರೇಮಿಗಳಾದ ಅಂಕೇ ಗೌಡ್ರರು ಶಿಕ್ಷಣ ಮತ್ತು ಸಾಹಿತ್ಯ ಕ್ಷೇತ್ರದಲ್ಲಿ ಸಲ್ಲಿಸಿದ ಅನುಪಮ ಸೇವೆಯನ್ನು ಗುರುತಿಸಿ, ಕರ್ನಾಟಕ ರಾಜ್ಯೋತ್ಸವ, ಲಿಮ್ಕಾ ರಾಷ್ಟ್ರೀಯ ಪ್ರಶಸ್ತಿಗಳು ಸೇರಿದಂತೆ 2026 ರ ಸಾಲಿನ ಪದ್ಮಶ್ರೀ ಪ್ರಶಸ್ತಿ ನೀಡಿ ಗೌರವಿಸಿರುವುದು ಇವರ ನಿಸ್ವಾರ್ಥ ಸೇವೆಗೆ ಸಂದ ಗೌರವವಾಗಿದೆ. ಅಂಕೇ ಗೌಡ್ರು ಇವರ ಪುಸ್ತಕ ಪ್ರೇಮ ನಮ್ಮ ವಿದ್ಯಾರ್ಥಿಗಳು ಹಾಗೂ ಯುವ ಜನಾಂಗಕ್ಕೆ ಮಾದರಿಯಾಗಲಿ. ಇಂದಿನ ಡಿಜಿಟಲ್ ಯುಗದಲ್ಲಿ ಪುಸ್ತಕಗಳು ಇ–ಸಂಪನ್ಮೂಲದಲ್ಲಿ ದೊರೆಯುತ್ತಿದ್ದರೂ ವಿದ್ಯಾರ್ಥಿಗಳು ಪುಸ್ತಕ ಓದುವ ಹವ್ಯಾಸವನ್ನು ಬೆಳೆಸಿಕೊಂಡು ಜ್ಞಾನಾರ್ಜನೆಗೆ ಅತ್ಯಂತ ಪರಿಣಾಮಕಾ–ರಿಯಾಗಬೇಕು.

ಲೇಖನ
– ಮಲ್ಲಪ್ಪ. ಸಿ.
ಖೊದ್ನಾಪೂರ
(ತಿಕೋಟಾ)
ವಿಜಯಪುರ



# ಯೋಗದಿಂದ ಆರೋಗ್ಯಕರ ವಿಶ್ವ ನಿರ್ಮಾಣ

■ ಉದಯರಶ್ಮಿ ದಿನಪತ್ರಿಕೆ

## ಆರೋಗ್ಯ ಅಂಗಳ



ಯೋಗವು ಪ್ರಾಚೀನ ಭಾರತೀಯ ಅಭ್ಯಾಸವಾಗಿದ್ದು, ಇದು ದೈಹಿಕ ಭಂಗಿಗಳು (ಆಸನಗಳು), ಉಸಿರಾಟದ ತಂತ್ರಗಳು (ಪ್ರಾಣಾಯಾಮ) ಮತ್ತು ಧ್ಯಾನದ ಮೂಲಕ ದೇಹ, ಮನಸ್ಸು ಮತ್ತು ಆತ್ಮದ ಸಮತೋಲನ ಕಾಪಾಡುತ್ತದೆ. ಇದು ಒತ್ತಡವನ್ನು ಕಡಿಮೆ ಮಾಡಿ, ನಮ್ಯತೆಯನ್ನು ಹೆಚ್ಚಿಸಲು ಮತ್ತು ಒಟ್ಟು ಆರೋಗ್ಯವನ್ನು ಸುಧಾ–ರಿಸುವ ಪರಿಣಾಮಕಾರಿ ಮಾರ್ಗವಾಗಿದೆ.

ಯೋಗ ಮಾಡಿದರೆ ಆರೋಗ್ಯವಂತರಾಗಿ ಇರಬಹುದು ಎನ್ನುವ ಮಾತಿದೆ. ಮಾನವ ಜೀವನದ ಪರಿಪೂರ್ಣ ವಿಕಾಸವುಂಟಾಗಲು ಯೋಗವು ಅನಿವಾರ್ಯ. ಆದಿಕಾಲದಿಂದಲೇ ಯೋಗದ ಬಳಕೆ ಇತ್ತೆಂಬುದು ಸಾಕ್ಷಗಳಿಂದ ತಿಳಿಯುತ್ತದೆ. 'ಯೋಗವು ಭಾರತೀಯ–ರಿಗೆ ಪರಂಪರಾಗತವಾಗಿ ಹಿರಿಯರಿಂದ ಬಂದ ಉಡುಗೊರೆ'. ಆದ್ದರಿಂದ ಮೊದಲು ಯೋಗ ಎಂದರೇನು, ಹೇಗೆ ಮಾಡಬೇಕು ಎಂಬುದನ್ನು ಸ್ಪಷ್ಟವಾಗಿ ಅರಿಯಬೇಕು. ಗಾಂಧೀಜಿಯ ಮಾತಿನಂತೆ 'ಶರೀರದ, ಮನಸ್ಸಿನ, ಆತ್ಮದ ಸರ್ವಶಕ್ತಿಗಳನ್ನೂ ಭಗವಂತನ ಜೊತೆಗೆ ಸಂಯೋಜನೆ ಮಾಡುವುದೇ ಯೋಗ'.

ದೇಹ ಮತ್ತು ಮನಸ್ಸು, ಮನಸ್ಸು ಮತ್ತು ಚೈತನ್ಯಗಳನ್ನು ಕೂಡಿಸುವುದು ಅಥವಾ ಬಂಧಿಸುವುದು ಅಥವಾ ನೊಗಕ್ಕೆ ಕಟ್ಟುವುದೇ ಯೋಗದ ಉದ್ದೇಶ. ಅರಿಷಡ್ವೈರಿಗಳಾದ ಕಾಮ, ಕ್ರೋಧ, ಲೋಭ, ಮೋಹ, ಮದ, ಮತ್ಸರಗಳೆಂಬ ಅರಿಷಡ್ವೈರಿಗಳು ಹೆಚ್ಚಾಗದೇ ಯೋಗ್ಯ ಸ್ಥಿತಿಯಲ್ಲಿ ಇರುವುದೇ ಆರೋಗ್ಯ. ಈ ಆರು ಅಂಶಗಳು ಅಂದರೆ ಎಲ್ಲವೂ ತನ್ನದಾಗಬೇಕೆಂಬ ಕಾಮ(ಆಸೆ), ಸಿಡುಕೆಂಬ(ಕ್ರೋಧ), ಇತರ ವಿಚಾರಗಳ ಬಗೆಗಿನ ನಿರೀಕ್ಷೆ(ಮೋಹ), ನಾನೇ ಹೆಚ್ಚೆಂಬ(ಮದ), ಇತರರ ಏಳಿಗೆಯನ್ನು ಸಹಿಸದ(ಮತ್ಸರ), ಇವುಗಳ ಈಡೇರಿಕೆಗಾಗಿ ವಂಚನೆ(ಲೋಭ) ಪ್ರಾಪಂಚಿಕವಾಗಿ ಹೆಚ್ಚಿದೆ. ಇವನ್ನು ಗೆಲ್ಲಲು ವ್ಯಕ್ತಿಗತವಾಗಿ 'ಈ ಆರೂ ಯೋಗ್ಯ ರೀತಿಯಲ್ಲಿ ನಿಯಂತ್ರಣದಲ್ಲಿ ಇರಬೇಕು'. ಇದರಿಂದ ಜಾಗತಿ–ಕ 'ಆರೋಗ್ಯಯುತ ವಿಶ್ವ' ನಿರ್ಮಾಣ ಸಾಧ್ಯ.

ಪ್ರತಿ ವರ್ಷ ಜೂನ್ 21 ರಂದು ಅಂತರರಾಷ್ಟ್ರೀಯ ಯೋಗ ದಿನವನ್ನು ಆಚ–ರಿಸುತ್ತೇವೆ. ಭಾರತದ ಪ್ರಸ್ತಾಪದಂತೆ ಮೇರೆಗೆ ವಿಶ್ವಸಂಸ್ಥೆ ಇದನ್ನು ಜಾರಿಗೆ ತಂದಿದ್ದು, ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಲು



ಯೋಗ ಅಗತ್ಯ. ಇದಕ್ಕೇ ಯೋಗ ಮಾಡಿ! ನಿರೋಗಿಯಾಗಿ!!! ಎಂದು ಹೇಳಿರುವುದು. ಈ ದಿನ ಜಗತ್ತಿನಾದ್ಯಂತ ಲಕ್ಷಾಂತರ ಜನರು ಸಾಮೂಹಿಕ ಯೋಗ ಮತ್ತು ಪ್ರಾಣಾಯಾಮ ಮಾಡುತ್ತಾರೆ. ಯೋಗದಿಂದ ದೇಹವು ಸದೃಢವಾಗಿ ರೋಗನಿರೋಧಕ ಶಕ್ತಿ ಹೆಚ್ಚುತ್ತದೆ. ಒತ್ತಡ, ಆತಂಕವನ್ನು ಕಡಿಮೆ ಮಾಡಿ ಮನಸ್ಸಿಗೆ ನೆಮ್ಮದಿ ನೀಡುತ್ತದೆ. ನಿತ್ಯದ ಯೋಗಾಭ್ಯಾಸವು ನೆನಪಿನ ಶಕ್ತಿ ಮತ್ತು ಏಕಾಗ್ರತೆಯನ್ನು ಹೆಚ್ಚಿಸಲು ತುಂಬಾ ಸಹಕಾರಿ.

ಲೇಖನ
– ಸಂತೋಷ್ ರಾವ್
ಪೆರ್ಮುಡ,
ಪರ್ಮುಡ ಮನೆ
ಪಟ್ರಮೆ ಗ್ರಾಮ ಮತ್ತು
ಅಂಚೆ
ಬೆಳ್ತಂಗಡಿ ತಾಲೂಕು
ದ.ಕ ಜಿಲ್ಲೆ–574198
ದೂ: 9742884160



## ಇಂದು ಮತ್ತು ನಾಳೆ ಸಚಿವ ಎಂ.ಬಿ.ಪಾಟೀಲ ಜಿಲ್ಲಾ ಪ್ರವಾಸ

■ ಉದಯರಶ್ಮಿ ದಿನಪತ್ರಿಕೆ



**ವಿಜಯಪುರ:** ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವ ಎಂ.ಬಿ.ಪಾಟೀಲ ಅವರು ವಿಜಯಪುರ ಜಿಲ್ಲೆಯಲ್ಲಿ ನಾಳೆ ದಿ.25 ಮತ್ತು ದಿ.26 ಎರಡು ದಿನಗಳ ಕಾಲ ಪ್ರವಾಸ ಕೈಗೊಳ್ಳಲಿದ್ದಾರೆ.

ದಿ.25 ಗುರುವಾರ ಬೆ.10 ರಿಂದ 12ಗಂ. ವರೆಗೆ ಬಿ.ಎಂ.ಪಾಟೀಲ ರಸ್ತೆ ಗೃಹ ಕಚೇರಿಯಲ್ಲಿ ಸಾರ್ವಜನಿಕರ ಕುಂದುಕೊರತೆ ಆಲಿಸಲಿದ್ದಾರೆ. ಸಂ.4ಗಂ. ಸಿಂದಗಿ ವಿಧಾನಸಭಾ ಕ್ಷೇತ್ರದ ಆಲಮೇಲ ತಾಲೂಕಿನಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಭೂಮಿಪೂಜೆ ಹಾಗೂ ಉದ್ಘಾಟಣೆ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

ದಿ.26 ಶುಕ್ರವಾರ ಬೆ.9ಗಂ., ಐಶ್ವರ್ಯನಗರ ರಾಣಿಚೆನ್ನಮ್ಮ ಮಂಗಲ ಕಾರ್ಯಾಲಯದಲ್ಲಿ ವಿಜಯಪುರ ಜಿಲ್ಲೆಯ ಎಲ್ಲ ವಿಧಾನಸಭಾ ಕ್ಷೇತ್ರಗಳ ಕಾಂಗ್ರೆಸ್ ಪಕ್ಷದ ಬಿ.ಎಲ್.ಎ ಗಳ ತರಬೇತಿ ಶಿಬಿರದಲ್ಲಿ ಭಾಗವಹಿಸಲಿದ್ದಾರೆ. ನಂತರ ಬೆಂಗಳೂರಿಗೆ ಪ್ರಯಾಣಿಸಲಿದ್ದಾರೆ ಎಂದು ಸಚಿವರ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

## ಆಲಮಟ್ಟಿ, ದೇವರ ಹಿಪ್ಪರಗಿ ತೋಟಗಾರಿಕೆ ಕ್ಷೇತ್ರಗಳ ಫಸಲುಗಳಿಗೆ ಬಹಿರಂಗ ಹರಾಜು





■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯ ಆಲಮಟ್ಟಿ ತೋಟಗಾರಿಕೆ ಕ್ಷೇತ್ರದಲ್ಲಿರುವ ನೇರಳೆ, ತೆಂಗು ಹಾಗೂ ಚಿಕ್ಕು ಫಸಲುಗಳನ್ನು ಮತ್ತು ದೇವರ ಹಿಪ್ಪರಗಿ ತೋಟಗಾರಿಕೆ ಕ್ಷೇತ್ರದಲ್ಲಿರುವ ಚಿಕ್ಕು ಫಸಲನ್ನು ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲು ತೀರ್ಮಾನಿಸಲಾಗಿದೆ.

ಸದರಿ ಫಸಲುಗಳನ್ನು ದಿನಾಂಕ 01.06.2026 ರಿಂದ 30.06.2026ರ ಅವಧಿಗೆ ರೋಡಿಸಿಕೊಳ್ಳಲು ಹರಾಜು ಪ್ರಕ್ರಿಯೆ ನಡೆಸಲಾಗುವುದು. ಆಸಕ್ತ ರೈತರು, ವ್ಯಾಪಾರಸ್ಥರು ಹಾಗೂ ಸಾರ್ವಜನಿಕರು ಸಂಬಂಧಿತ ತೋಟಗಾರಿಕೆ ಕ್ಷೇತ್ರಗಳಿಗೆ ಭೇಟಿ ನೀಡಿ ಫಸಲನ್ನು ವೀಕ್ಷಿಸಿ, ನಿಬಂಧನೆ ಮತ್ತು ಷರತ್ತುಗಳಿಗೆ ಒಪ್ಪಿಗೆ ಸೂಚಿಸಿ ಹರಾಜಿನಲ್ಲಿ ಭಾಗವಹಿಸಬಹುದಾಗಿದೆ.

**ಹರಾಜು ದಿನಾಂಕಗಳು:**

* ಆಲಮಟ್ಟಿ ತೋಟಗಾರಿಕೆ ಕ್ಷೇತ್ರ 02.07.2026
* ದೇವರ ಹಿಪ್ಪರಗಿ ತೋಟಗಾರಿಕೆ ಕ್ಷೇತ್ರ 03.07.2026

ಹರಾಜು ಪ್ರಕ್ರಿಯೆಗೆ ಸಂಬಂಧಿಸಿದ ಹೆಚ್ಚಿನ ಮಾಹಿತಿಗಾಗಿ ತೋಟಗಾರಿಕೆ ಉಪನಿರ್ದೇಶಕರ (ರಾಜ್ಯ ವಲಯ), ವಿಜಯಪುರ ಕಚೇರಿಯನ್ನು ಸಂಪರ್ಕಿಸಬಹುದು. ಸಂಪರ್ಕ ಸಂಖ್ಯೆ: 99162 87385

## ಪಾರದರ್ಶಕ ಮತದಾರರ ಪಟ್ಟಿ ಸಿದ್ಧಪಡಿಸುವುದು ಎಸ್ಐಆರ್ ಉದ್ದೇಶ

■ ಉದಯರಶ್ಮಿ ದಿನಪತ್ರಿಕೆ




ಜಮಖಂಡಿ: ಮತದಾರರ ಪಟ್ಟಿಯನ್ನು ಹೆಚ್ಚು ನಿಖರವಾಗಿ ಹಾಗೂ ಪಾರದರ್ಶಕವಾಗಿಡುವ ಉದ್ದೇಶದಿಂದ ನಮ್ಮ ರಾಜ್ಯದಲ್ಲಿ ಚುನಾವಣಾ ಆಯೋಗವು ವಿಶೇಷ ಸಮಗ್ರ ಪರಿಷ್ಕರಣೆ (ಎಸ್ಐಆರ್) ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಉಪವಿಭಾಗಾಧಿಕಾರಿ ಶ್ವೇತಾ ಬಿಡಿಕರ್ ಹೇಳಿದರು.

ನಗರದ ಮಿನಿ ವಿಧಾನಸೌಧದ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣಾ ಆಯೋಗದ ನಿರ್ದೇಶನದಂತೆ ವಿಶೇಷ ಸಮಗ್ರ ಮತದಾರ ಪಟ್ಟಿ ಪರಿಷ್ಕರಣೆ ಅಭಿಯಾನವನ್ನು ಜೂನ್ 30 ರಿಂದ ಜುಲೈ 29 ವರೆಗೆ ಒಂದು ತಿಂಗಳವರೆಗೆ ನಡೆಸಲಾಗುವುದು, ಪ್ರಸ್ತುತ ನಡೆಯುತ್ತಿರುವ 14 ನೆಯ ವಿಶೇಷ ಸಮಗ್ರ ಪರಿಷ್ಕರಣೆ ಎಂದು ಪರಿಗಣಿಸಲಾಗಿದೆ.

2002 ರಲ್ಲಿರುವ ಮತದಾರರ ಪಟ್ಟಿಯಲ್ಲಿರುವ ಅರ್ಹ ಮತದಾರರ ಮಕ್ಕಳು, ಸಂಬಂಧಿಕರು ಅರ್ಹರಾಗಿರುತ್ತಾರೆ. ಯಾವುದೇ ಅರ್ಹ ಮತದಾರರು ಪಟ್ಟಿಯಿಂದ ಹೊರಗೆ ಹೋಗಬಾರದು, ಅನರ್ಹ ಮತದಾರ ಹೆಸರನ್ನು ತೆಗೆದು ಹಾಕಿ ಪಾರದರ್ಶಕ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವುದು ಎಸ್ಐಆರ್ ನ ಪ್ರಮುಖ ಉದ್ದೇಶವಾಗಿದೆ.

ಮತದಾರರ ಪಟ್ಟಿ ಪರಿಷ್ಕರಣೆ ಪ್ರಾರಂಭದಿಂದ ಪ್ರತಿ ಮನೆಗಳಿಗೆ ಭೂತ ಮಟ್ಟದ ಅಧಿಕಾರಿಗಳು ಭೇಟಿ ನೀಡಿ ಪೂರ್ವ ಮುದ್ರಿತ ಎಣಿಕೆ ನಮೂನೆಯನ್ನು ವಿತರಿಸಲಿದ್ದು ಅವುಗಳನ್ನು ಒಂದು ಫೋಟೋ ಜೊತೆ ಭರ್ತಿ ಮಾಡಿ ಬಿ ಎಲ್ ಓ ಗಳಿಗೆ ಹಿಂತಿರುಗಿಸಬೇಕು. ಮನೆಯಲ್ಲಿ ಯಾರು ಇಲ್ಲದಿದ್ದರೆ ಅಂತ ಮನೆಗಳಿಗೆ ಬಿ ಎಲ್ ಓಗಳು 3 ಬಾರಿ ಕಡ್ಡಾಯವಾಗಿ ಭೇಟಿ ನೀಡಬೇಕು. ನಂತರವು ಅವರು ಸಂಪರ್ಕಕ್ಕೆ ಸಿಗದಿದ್ದರೆ ಅವರನ್ನು ವಿಚಾರಣೆ ಕರೆಯುತ್ತೇವೆ, ಹಾಗೂ ಅರ್ಜಿ ನಮೂನೆಯನ್ನು ಯಾರು ಭರ್ತಿ ಮಾಡಿ ಕೊಡುವುದಿಲ್ಲವೋ ಅವರನ್ನು ಕಡ್ಡಾಯವಾಗಿ ವಿಚಾರಣೆಗೆ ಕರೆದು ಅವರಿಂದ ಮಾಹಿತಿ ಪಡೆಯುತ್ತೇವೆ ಎಂದರು.

ಮೊದಲು ಪ್ರತಿ ವಾರ್ಡ್‌ಗೆ 1500 ಮತದಾರ ಪಟ್ಟಿ ಇರುತ್ತಿತ್ತು. ಈಗ ಅದನ್ನು 1200 ಸೀಮಿತಗೊಳಿಸಲಾಗಿದೆ ಎಂದರು.

ನಮ್ಮ ಭಾಗದಲ್ಲಿ 232 ಪೋಲಿಂಗ್ ಇದ್ದು 232 ಬಿ ಎಲ್ ಓ ಗಳನ್ನು ನೇಮಕ ಮಾಡಲಾಗಿದೆ. 10 ಬಿ ಎಲ್ ಓ ಗಳಿಗೆ ಒಬ್ಬ ಸೂಪರ್ವೈಸರ್ ನೇಮಕ ಮಾಡಲಾಗಿದೆ. ಪ್ರತಿ ಗ್ರಾಮ ಪಂಚಾಯಿತಿ ಕಾರ್ಯಾಲಯಗಳಲ್ಲಿ ಮತದಾರರ ಸಹಾಯವಾಣಿ ಕೇಂದ್ರ ಸ್ಥಾಪಿಸಲಾಗಿದೆ.2002 ರ ಮತದಾರರ ಪಟ್ಟಿಯಲ್ಲಿ ಹೆಸರು ಇಲ್ಲದಿದ್ದರೆ ಅಂತವರು ಜನನ ಪ್ರಮಾಣ ಪತ್ರ , ಶೈಕ್ಷಣಿಕ ದಾಖಲಾತಿ ಹೀಗೆ ಒಟ್ಟು 12 ದಾಖಲೆಗಳಲ್ಲಿ ಒಂದು ದಾಖಲೆಯಾದರು ಇರಬೇಕು ಎಂದು ಹೇಳಿದರು.

ಮತದಾರರು ತಮ್ಮ ಸ್ವಯಂ ದೃಢೀಕರಣದೊಂದಿಗೆ ಸರಿಯಾದ ಮಾಹಿತಿಯನ್ನು ನೀಡಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ್ ಅನಿಲ್ ಬಡಿಗೇರ ಇದ್ದರು.

## ಬಿತ್ತನೆ ಬೀಜ ಮಾರಾಟ ಮಳಿಗೆ : ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯಲ್ಲಿನ ಬೀಜ ಮಾರಾಟ ಮಳಿಗೆಗಳು, ಕೃಷಿ ಸೇವಾ ಕೇಂದ್ರಗಳು ಹಾಗೂ ಕೃಷಿ ಸಂಬಂಧಿತ ವಹಿವಾಟು ನಡೆಸುತ್ತಿರುವ ಅರ್ಹ ವ್ಯಾಪಾರಿಗಳು ಬಿತ್ತನೆ ಬೀಜ ಮಾರಾಟಕ್ಕೆ ಅಗತ್ಯವಾದ ಬೀಜ ಮಾರಾಟ ಪರವಾನಗಿ (ಸೀಡ್ ಲೈಸೆನ್ಸ್) ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ.

ಬೀಜ ಕಾಯ್ದೆ–1966 ಹಾಗೂ ಬೀಜ ನಿಯಮ–1968ರ ಅನ್ವಯ ರೈತರಿಗೆ ಗುಣಮಟ್ಟದ ಮತ್ತು ಪ್ರಮಾಣಿತ ಬೀಜಗಳನ್ನು ಮಾತ್ರ ಮಾರಾಟ ಮಾಡಬೇಕು. ಅದರಂತೆ ತರಕಾರಿ ಮತ್ತು ಹೂವಿನ ಬೀಜಗಳನ್ನು ಮಾರಾಟ ಮಾಡುವ ವ್ಯಾಪಾರಸ್ಥರು ಬೀಜಗಳ ನಿಯಂತ್ರಣ ಆದೇಶ–1983ರ ಪ್ರಕಾರ ತೋಟಗಾರಿಕೆ ಇಲಾಖೆಯಿಂದ ಬೀಜ ಮಾರಾಟ ಪರವಾನಗಿ ಪಡೆಯುವುದು ಕಡ್ಡಾಯವಾಗಿದೆ.

ಆದ್ದರಿಂದ ಜಿಲ್ಲೆಯಲ್ಲಿನ ಎಲ್ಲಾ ಬೀಜ ಮಾರಾಟ ವ್ಯಾಪಾರಿಗಳು ಜುಲೈ 15ರೊಳಗಾಗಿ ಸೇವಾ ಸಿಂಧು ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಿ ಬೀಜ ಮಾರಾಟ ಪರವಾನಗಿ ಪತ್ರವನ್ನು ಪಡೆಯಬೇಕು.

ಪರವಾನಗಿ ಪಡೆಯದೇ ಬೀಜ ಮಾರಾಟ ನಡೆಸುತ್ತಿರುವುದು ಕಂಡು ಬಂದಲ್ಲಿ ಸಂಬಂಧಪಟ್ಟವರ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ಇಲಾಖೆ ಎಚ್ಚರಿಕೆ ನೀಡಿದೆ.

ಪರವಾನಗಿ ಪಡೆಯಲು ಅರ್ಜಿ ನಮೂನೆ ಜೊತೆಗೆ ಆಧಾರ್ ಕಾರ್ಡ್, ಪ್ಯಾನ್ ಕಾರ್ಡ್, ಜಿಎಸ್‌ಟಿ ನೋಂದಣಿ ಪ್ರಮಾಣಪತ್ರ, ಬೀಜ ಉತ್ಪಾದನಾ ಸಂಸ್ಥೆಯಿಂದ ಪಡೆದ ಬೀಜ ಮೂಲ ಪ್ರಮಾಣಪತ್ರ, ಮಳಿಗೆಯ ಸ್ವಂತ ಅಥವಾ ಬಾಡಿಗೆ ದಾಖಲಾತಿಗಳು, ನಗರಸಭೆ ಅಥವಾ ಗ್ರಾಮ ಪಂಚಾಯಿತಿಯಿಂದ ಪಡೆದ ಮಳಿಗೆ ನೋಂದಣಿ ಪ್ರಮಾಣಪತ್ರ ಹಾಗೂ ಇತ್ತೀಚಿನ ತೆರಿಗೆ ಪಾವತಿ ರಶೀದಿ ಸೇರಿದಂತೆ ಅಗತ್ಯ ದಾಖಲೆಗಳನ್ನು ಸಲ್ಲಿಸುವಂತೆಯೂ ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಸಮೀಪದ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದು ಎಂದು ತೋಟಗಾರಿಕೆ ಇಲಾಖೆ ಪ್ರಕಟಣೆ ತಿಳಿಸಿದೆ.

## ಬಿಎಲ್ಡಿಇ ಆಸ್ಪತ್ರೆ ವೈದ್ಯರಿಗೆ ಕೃತಜ್ಞತೆ ಸಲ್ಲಿಸಿದ ನಬೀಸಾಬ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನಗರದ ಬಿ.ಎಲ್.ಡಿ.ಇ ಆಸ್ಪತ್ರೆಯಲ್ಲಿ ಹೃದಯಸ್ಪರ್ಶಿ ಘಟನೆಯೊಂದು ಮಂಗಳವಾರ ನಡೆಯಿತು.

ಗೊರನಾಳ ಗ್ರಾಮದ 75 ವರ್ಷದ ಹಿರಿಯ ನಾಗರಿಕರೊಬ್ಬರು ತಮ್ಮ ಮಗಳು ಮತ್ತು ಮೊಮ್ಮಗನೊಂದಿಗೆ ಬಿ.ಎಲ್.ಡಿ.ಇ ಆಸ್ಪತ್ರೆಗೆ ಬಂದು ನನ್ನದೊಂದು ಅಳಿಲು ಕಾಣಿಕೆ ಸ್ವೀಕರಿಸಿ ಎಂದು ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ಎಸ್. ಆರ್. ಬೆಂತೂರು ಮತ್ತು ಎಲುವು ಮತ್ತು ಕೀಲು ತಜ್ಞ ಡಾ.ಗಿರೀಶ ಖೋದ್ನಾಪುರ ಅವರನ್ನು ಕೇಳಿಕೊಂಡರು. ಆಗ ಒಂದು ಕ್ಷಣ ವೈದ್ಯರು, ಇದೆಲ್ಲ ಏಕೆ ಎಂದು ಪ್ರಶ್ನಿಸಿದರು. ಆಗ 75 ವರ್ಷದ ನಬೀಸಾಬ ಪಿಂಜಾರ ತಾನು ಈಗ ಸಂಪೂರ್ಣ ಗುಣಮುಖನಾಗಿದ್ದು, ಊರುಗೋಲಿನ ಸಹಾಯವಿಲ್ಲದೆ ನಡೆಯುತ್ತಿದ್ದೇನೆ. ಈ ಸಂತಸವನ್ನು ತಮ್ಮೊಂದಿಗೆ ಹಂಚಿಕೊಳ್ಳಲು ಮಗಳು ಮತ್ತು ಮೊಮ್ಮಗನೊಂದಿಗೆ ಬಂದಿದ್ದೇನೆ ಎಂದು ಹೇಳಿ ತನ್ನ ಜೊತೆಗೆ ತಂದಿದ್ದ ಅಕ್ಕಿ ಮತ್ತು ಗೋದಿಯ ಮೂಟೆಯನ್ನು ಆಸ್ಪತ್ರೆಗೆ ನೀಡಿದರು.

ಪ್ರಕರಣದ ಹಿನ್ನೆಲೆ: ಗೊರನಾಳ ಗ್ರಾಮದ 75 ವರ್ಷದ ಹಿರಿಯ ವ್ಯಕ್ತಿ ನಬೀಸಾಬ ಪಿಂಜಾರ ಕಾಲು ಜಾರಿ ಬಿದ್ದ ಪರಿಣಾಮ ಅವರ ಎಡಚಪ್ಪೆಗೆ ಗಂಭೀರ ಗಾಯವಾಗಿತ್ತು. ನಡೆಯಲೂ ಸಾಧ್ಯವಾಗದ ಪರಿಸ್ಥಿತಿಯಲ್ಲಿ ನಗರದ ಬಿ.ಎಲ್.ಡಿ.ಇ ಆಸ್ಪತ್ರೆಗೆ ದಾಖಲಾಗಿದ್ದರು. ಎರಡು ವಾರಗಳ ಹಿಂದೆ ಡಾ. ಗಿರೀಶ ಖೋದ್ನಾಪುರ ಮತ್ತು ತಂಡದವರು ಅರವಳಿಗೆ ವೈದ್ಯರ ಜೊತೆ ಸೇರಿ ಬೈಪೋಲಾರ ಹೆಮಿಆರ್ಥೋಪ್ಲಾಸ್ಟಿ ಶಸ್ತ್ರಚಿಕಿತ್ಸೆ ನಡೆಸಿ ಎಡಚಪ್ಪೆಯ ಎಲುಬನ್ನು ಬದಲಾಯಿಸಿದ್ದರು. ಎ.ಬಿ.ಎ.ಆರ್.ಕೆ ಸ್ಕೀಂ ನಡಿ ಉಚಿತವಾಗಿ ಈ ಶಸ್ತ್ರಚಿಕಿತ್ಸೆ ಮಾಡಿದ್ದರು. ನಂತರ ಗುಣಮುಖನಾದ ನಬೀಸಾಬ ಪಿಂಜಾರ ತಮ್ಮೂರಿಗೆ ತೆರಳಿದ್ದರು. ಕೆಲವು ದಿನಗಳ ನಂತರ ಊರುಗೋಲಿನ ಸಹಾಯವಿಲ್ಲದೆ ತಾವು ಮೊದಲಿನಂತೆಯೇ ಆರಾಮಾಗಿ ನಡೆಯಲಾರಂಭಿಸಿದರು. ತಾವು ಆಸ್ಪತ್ರೆಯಲ್ಲಿದ್ದಾಗ ಸಾಮಾನ್ಯ ವಾರ್ಡಿನ ರೋಗಿಗಳಿಗೆ ಬಿ.ಎಲ್.ಡಿ.ಇ ಆಸ್ಪತ್ರೆ ವತಿಯಿಂದ ಪ್ರತಿದಿನ ಉಚಿತವಾಗಿ ಬೆಳಿಗ್ಗೆ ಉಪಹಾರ ಮತ್ತು ಮಧ್ಯಾಹ್ನ ಹಾಗೂ ರಾತ್ರಿ ಊಟ ನೀಡುತ್ತಿರುವುದನ್ನು ಅವರು ಗಮನಿಸಿದ್ದರು. ಹೀಗಾಗಿ ತಮ್ಮದೂ ಅಳಿಲು ಸೇವೆ ಇರಲಿ ಎಂಬ ಸದುದ್ದೇಶದಿಂದ ತಮ್ಮ ಜೊತೆಗೆ ತಂದಿದ್ದ ಅಕ್ಕಿ ಮತ್ತು ಗೋದಿಯ ಮೂಟೆಯನ್ನು ಕಿರುಕಾಣಿಕೆಯ ರೂಪದಲ್ಲಿ ಆಸ್ಪತ್ರೆಗೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ನಬಿಸಾಬ ನದಾಫ ಶಸ್ತ್ರಚಿಕಿತ್ಸೆ ಸಂದರ್ಭದಲ್ಲಿ ಗಾಬರಿಯಾಗಿದ್ದೆ. ಮುಪ್ಪಿನ ವಯಸ್ಸಿನಲ್ಲಿ ಯಾವುದೇ ಸಹಾಯವಿಲ್ಲದೇ ಮತ್ತೆ ನಡೆಯಲು ಸಾಧ್ಯವೇ ಎಂಬ ಆತಂಕವಿತ್ತು. ಆದರೆ, ಡಾ. ಗಿರೀಶ ಖೋದ್ನಾಪುರ ಧೈರ್ಯ ಹೇಳಿ ಯಶಸ್ವಿ ಶಸ್ತ್ರಚಿಕಿತ್ಸೆ ಮಾಡಿದ್ದಾರೆ.

ಈಗ ನಾನು ಮುಂಚೆಯಂತೆ ಸಾಮಾನ್ಯವಾಗಿ ನಡೆಯುತ್ತಿದ್ದೇನೆ. ಈ ಸಂತಸದ ಕ್ಷಣಗಳನ್ನು ವೈದ್ಯರೊಂದಿಗೆ ಹಂಚಿಕೊಳ್ಳಲು ನಿರ್ಧರಿಸಿದಾಗ ನನ್ನ ಮಗಳು ಮತ್ತು ಮೊಮ್ಮಗ ತಾವೂ ಕೂಡ ವೈದ್ಯರಿಗೆ ಧನ್ಯವಾದ ತಿಳಿಸಲು ಆಗಮಿಸುವುದಾಗಿ ನನ್ನ ಜೊತೆ ಬಂದಿದ್ದಾರೆ. ಬಿ.ಎಲ್.ಡಿ.ಇ ಆಸ್ಪತ್ರೆಯ ವೈದ್ಯರ ಪ್ರೀತಿಯ ಮತ್ತು ಅಕ್ಕರೆಯ ಚಿಕಿತ್ಸೆ ಮತ್ತು ಆರೈಕೆಗೆ ಕೃತಜ್ಞತೆ ಸಲ್ಲಿಸುವುದಾಗಿ ತಿಳಿಸಿದರು.

ವೈದ್ಯಕೀಯ ಅಧೀಕ್ಷಕ ಡಾ. ಎಸ್. ಎನ್. ಬೆಂತೂರ ಮಾತನಾಡಿ, ಸಾಮಾನ್ಯವಾಗಿ ರೋಗಿಗಳು ತಮ್ಮ ಸಮಸ್ಯೆಗಳನ್ನು ಹೇಳಿಕೊಳ್ಳಲು ಭೇಟಿಗೆ ಬರುತ್ತಾರೆ. ಆದರೆ, ನಬೀಸಾಬ ಪಿಂಜಾರ ಅವರು ಕೃತಜ್ಞತೆ ಸಲ್ಲಿಸಲು ಆಗಮಿಸಿರುವುದು ವೈದ್ಯರಾದ ನಮಗೆಲ್ಲರಿಗೂ ಮತ್ತಷ್ಟು ಹೆಮ್ಮೆ ಪಡುವಂತೆ ಮಾಡಿದೆ. ನಮ್ಮಲ್ಲಿ ಎಲ್ಲ ಆರೋಗ್ಯ ಯೋಜನೆಗಳು ಲಭ್ಯವಿದ್ದು, ರೋಗಿಗಳಿಗೆ ವರದಾನವಾಗಿವೆ ಎಂದು ತಿಳಿಸಿದರು.

ಶಸ್ತ್ರಚಿಕಿತ್ಸಕ ಡಾ.ಗಿರೀಶ ಖೋದ್ನಾಪುರ ಮಾತನಾಡಿ, ನಬೀಸಾಬ ಪಿಂಜಾರ ಅವರು ಬಂದು ಈ ರೀತಿಯಲ್ಲಿ ಕೃತಜ್ಞತೆ ಸಲ್ಲಿಸಿರುವುದನ್ನು ಕಂಡು ಮಾತುಗಳೇ ಬಾರದಾಗಿವೆ. ಪ್ರತಿಯೊಬ್ಬ ರೋಗಿಗೂ ಗುಣಮಟ್ಟದ ಚಿಕಿತ್ಸೆ ನೀಡಬೇಕು ಎಂಬುದು ಬಿ.ಎಲ್.ಡಿ.ಇ ಸಂಸ್ಥೆಯ ಅಧ್ಯಕ್ಷ ಎಂ. ಬಿ. ಪಾಟೀಲ ಮತ್ತು ಕುಲಾಧಿಪತಿ ಬಿ. ಎಂ. ಪಾಟೀಲ ಅವರ ಆಶಯವಾಗಿದೆ. ಅದರಂತೆ ಆಸ್ಪತ್ರೆಯ ವೈದ್ಯರೆಲ್ಲರೂ ರೋಗಿಗಳ ಸೇವೆಯಲ್ಲಿ ತೊಡಗಿದ್ದೇವೆ. ಇಂಥ ಸಂತಸ ಭರಿತ ಕ್ಷಣಗಳು ನಮ್ಮನ್ನು ಮತ್ತಷ್ಟು ಉತ್ತಮ ಕಾರ್ಯ ಮಾಡಲು ಸ್ಫೂರ್ತಿ ನೀಡುತ್ತವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಆಸ್ಪತ್ರೆಯ ಸಹಾಯಕ ಆಡಳಿತಾಧಿಕಾರಿ ಏಕನಾಥ ಜಾಧವ ಉಪಸ್ಥಿತರಿದ್ದರು. ಅಲ್ಲದೇ, ರೋಗಿಗಳು ನೀಡಿದ ಅಕ್ಕಿ ಮತ್ತು ಗೋದಿಯನ್ನು ಆಸ್ಪತ್ರೆಯ ಆಹಾರ ವಿತರಣೆ ವಿಭಾಗಕ್ಕೆ ಕಳುಹಿಸಿದರು.

## ಸಾಹಿತ್ಯ ಸಮ್ಮೇಳನಕ್ಕೆ ತಾಲೂಕಾಡಳಿತದ ಸಂಪೂರ್ಣ ಸಹಕಾರ

### 21ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಪೂರ್ವಭಾವಿ ಸಭೆಯಲ್ಲಿ ಸಿಂದಗಿ ತಾಲೂಕು ದಂಡಾಧಿಕಾರಿ ಕರೆಪ್ಪ ಬೆಳ್ಳಿ ಭರವಸೆ

■ ಉದಯರಶ್ಮಿ ದಿನಪತ್ರಿಕೆ




ಸಿಂದಗಿ: ನಗರದಲ್ಲಿ ಜುಲೈ 21 ಮತ್ತು 22 ರಂದು ಜರುಗುವ 21ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ತಾಲೂಕಾಡಳಿತದಿಂದ ಸಂಪೂರ್ಣ ಸಹಕಾರ ನೀಡುವುದಾಗಿ ತಾಲೂಕು ದಂಡಾಧಿಕಾರಿ ಕರೆಪ್ಪ ಬೆಳ್ಳಿ ಭರವಸೆ ವ್ಯಕ್ತಪಡಿಸಿದರು.

ಸಿಂದಗಿ ನಗರದ ತಾಲೂಕು ಆಡಳಿತ ಸೌಧದ ಸಭಾಂಗಣದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನೊಂದಿಗೆ ನಡೆದ 21ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ನನ್ನ ಆಡಳಿತಾವಧಿಯಲ್ಲಿ ತಾಲೂಕಿನಲ್ಲಿ ಜಿಲ್ಲಾ ಸಮ್ಮೇಳನ ನಡೆಯುತ್ತಿರುವುದು ಅತ್ಯಂತ ಸಂತೋಷಕರ ಸಂಗತಿ. ಕನ್ನಡಮ್ಮನ ನುಡಿ ತೇರನೆಳೆದು ಸೇವೆ ಮಾಡುವ ಸೌಭಾಗ್ಯ ನಮಗೆ ದೊರಕಿರುವದು ನಮ್ಮೆಲ್ಲರ ಅದೃಷ್ಟ. ಸಾಹಿತ್ಯ ಸಮ್ಮೇಳನವನ್ನು ಅರ್ಥಪೂರ್ಣವಾಗಿ, ಮಾದರಿಯಾಗಿ ಆಚರಿಸೋಣ ಎಂದರು.

ಈ ವೇಳೆ ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಹಾಸಿಂಪೀರ ವಾಲಿಕಾರ ಮಾತನಾಡಿ, ಸಿಂದಗಿಯಲ್ಲಿ ಸಾಹಿತ್ಯಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿರುವುದರಿಂದ ಸಮ್ಮೇಳನದ ತಯಾರಿಗೆ ಅಭೂತಪೂರ್ವ ಬೆಂಬಲ ವ್ಯಕ್ತವಾಗುತ್ತಿದೆ. ಅಕ್ಷರ ಜಾತ್ರೆಯ ಯಶಸ್ಸು ಪ್ರತಿ ಕನ್ನಡಿಗನ ಸಹಕಾರದ ಜೊತೆ ಜೊತೆಗೆ ತಾಲೂಕಾಡಳಿತದ ಮೇಲೆಯೂ ಗುರುತರ ಜವಾಬ್ದಾರಿ ಇದೆ. ಸಿಂದಗಿ ಮತಕ್ಷೇತ್ರದ ಶಾಸಕ ಅಶೋಕ ಮನಗೂಳಿ ಅವರು ಈಗಾಗಲೇ ತಾಲೂಕಾಡಳಿತ ಹಾಗೂ ತಾಲೂಕಿನ ಹಿರಿಯರೊಂದಿಗೆ ಸಭೆಯನ್ನು ಮಾಡಿ ಸೂಕ್ತ ಸೂಚನೆಗಳನ್ನು ನೀಡಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ತಾಲೂಕು ಘಟಕದ ಅಧ್ಯಕ್ಷ ವಾಯ್.ಸಿ.ಮಯೂರ ಮಾತನಾಡಿ, 14 ವರ್ಷಗಳ ಹಿಂದೆ ಸಿಂದಗಿಯಲ್ಲಿ ಜಿಲ್ಲಾ ಸಮ್ಮೇಳನ ಜರುಗಿದೆ. ಈಗ ಮತ್ತೊಮ್ಮೆ ಜಿಲ್ಲಾ ಸಮ್ಮೇಳನ ಆಚರಣೆ ಮಾಡುವ ಸುಯೋಗ ದೊರೆತದ್ದು ತಾಲೂಕಿನ ಸುದೈವ. 21ನೇ ಜಿಲ್ಲಾ ಸಾಹಿತ್ಯ ಸಮ್ಮೇಳನ ಯಶಸ್ಸಿಗೆ ಶಾಸಕರು ಹಾಗೂ ತಾಲೂಕ ಆಡಳಿತಕ್ಕೆ ಗೌರವ ದೊರಕುವುದು ಎಂದರು.

ಪ್ರಾಸ್ತಾವಿಕವಾಗಿ ತಾಲೂಕು ಗೌರವ ಕಾರ್ಯದರ್ಶಿ ಆನಂದ ಶಾಬಾದಿ ಮಾತನಾಡಿದರು.

ಶಿಕ್ಷಕಿ, ಸಾಹಿತಿ ಸೈನಾಬಿ ಮಸಳಿ ಪ್ರಾರ್ಥಿಸಿದರು. ಶಿಕ್ಷಕ ಮಹೆತಾಬ ಕಾಗವಾಡ ಗೀತಗಾಯನ ಮಾಡಿದರು. ಪದಾಧಿಕಾರಿಗಳಾದ ಶಾಂತು ರಾಣಾಗೋಳ, ಎಸ್. ಎಸ್.ಸಾತಿಹಾಳ, ವರ್ಷಾ ಪಾಟೀಲ, ಸುನಂದಾ ಯಂಪೂರೆ, ರಾಮಕೃಷ್ಣ ಹೆಬ್ಬಾಳ, ಶಿವಾನಂದ ಶಿವಸಿಂಪಗೇರ, ಡಾ.ಪ್ರಕಾಶ ರಾಗರಂಜಿನಿ, ಅನಸೂಯ ಪಾರಗೊಂಡ, ಅಂಬರೀಶ ಚೌಗಲೆ, ಖಲೀಲ ಬಡಿಗೇರ, ವಿಶ್ವನಾಥ ಪಾಟೀಲ ಸೇರಿದಂತೆ ಸಾಹಿತ್ಯಾಸಕ್ತರು, ಕನ್ನಡಾಭಿಮಾನಿಗಳು ಇದ್ದರು.

## ಶಿಕ್ಷಣ ಸಂಸ್ಥೆಗಳಿಗೆ ಎಲ್ಲರ ಸಹಕಾರ ಅಗತ್ಯ : ಅಂಗಡಿ

■ ಉದಯರಶ್ಮಿ ದಿನಪತ್ರಿಕೆ



ದೇವರಹಿಪ್ಪರಗಿ: ಶಿಕ್ಷಣ ಸಂಸ್ಥೆಗಳನು ಕಟ್ಟಿ ಬೆಳೆಸುವ ಕಾರ್ಯ ಸಾಧಾರಣವಲ್ಲ. ಇಂಥ ಕಾರ್ಯಕ್ಕೆ ಎಲ್ಲರ ಸಹಕಾರ ಅಗತ್ಯ ಎಂದು ವೆಂಕಟೇಶ್ವರ ವಿದ್ಯಾವರ್ಧಕ ಸಂಘದ ಸಮೂಹ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಎಲ್.ಆರ್. ಅಂಗಡಿ ಹೇಳಿದರು.

ಪಟ್ಟಣದ ವೆಂಕಟೇಶ್ವರ ವಿದ್ಯಾವರ್ಧಕ ಸಂಘದ ಕಾಲೇಜು ಆವರಣದಲ್ಲಿ ಬುಧವಾರ ಜರುಗಿದ ಪ್ರೌಢಶಾಲೆ ಹಾಗೂ ಕಾಲೇಜು ವಿದ್ಯಾರ್ಥಿಗಳ ಸ್ವಾಗತ ಸಮಾರಂಭದಲ್ಲಿ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪುಸ್ತಕ ರೂಪದಲ್ಲಿ ಪಾರಿತೋಷಕ ವಿತರಣೆ ಮಾಡಿ ಮಾತನಾಡಿದರು.

ಕೇವಲ ಶಿಕ್ಷಣ ಸಂಸ್ಥೆಗಳ ಸ್ಥಾಪನೆ, ಆರಂಭದಿಂದ ಏಳಿಗೆ ಅಸಾಧ್ಯ. ಸಂಸ್ಥೆಗಳನ್ನು ಅಭಿವೃದ್ಧಿ ಪಥದಲ್ಲಿ ಮುನ್ನಡೆಸಿ ವಿದ್ಯಾರ್ಥಿಗಳ ಭವಿಷ್ಯ ಉಜ್ವಲಗೊಳಿಸಿದಲ್ಲಿ ಮಾತ್ರ ಶಿಕ್ಷಣ ಸಂಸ್ಥೆಗಳ ಸ್ಥಾಪನೆಗೆ ಸಾರ್ಥಕತೆ ದೊರಕಿದಂತಾಗುತ್ತದೆ. ಅದಕ್ಕಾಗಿ ಶಿಕ್ಷಕ ಸಮೂಹದ ಜೊತೆಗೆ ಪಾಲಕ ಬಂಧುಗಳು ಕೈಜೋಡಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ಪ್ರೌಢ ಹಾಗೂ ಕಾಲೇಜು ವಿದ್ಯಾರ್ಥಿಗಳಿಗೆ ಉಚಿತ ಬ್ಯಾಗ್ ವಿತರಿಸಲಾಯಿತು. ನಂತರ ವಿವಿಧ ಚಟುವಟಿಕೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪಾರಿತೋಷಕ ವಿತರಿಸಲಾಯಿತು. ನಂತರ ಬ್ಯಾಂಕಾಕ್‌ನಲ್ಲಿ ಜರುಗಿದ 10ನೇ ಅಂತರಾಷ್ಟ್ರೀಯ ಸಮ್ಮೇಳನದಲ್ಲಿ ಗೌರವಯುತ ಸುಸ್ಥಿರ ಶಿಕ್ಷಣ ಅಭಿವೃದ್ಧಿ ಹರಿಕಾರ ಪ್ರಶಸ್ತಿಗೆ ಭಾಜನರಾದ ಅಧ್ಯಕ್ಷರನ್ನು ಸಂಸ್ಥೆಯಿಂದ ಸನ್ಮಾನಿಸಲಾಯಿತು.

ಪ್ರಾಚಾರ್ಯ ಎಸ್.ಡಿ.ರಜಪೂತ, ಮುಖ್ಯಶಿಕ್ಷಕ ಎನ್. ಎಲ್.ಅಂಗಡಿ, ಪ್ರಕಾಶ ನಾಯಿಕ್, ಎಂ.ಎನ್.ಪತ್ತಾರ, ಎಸ್.ಎಸ್.ಸೊನ್ನದ, ಡಿ.ಎಸ್.ಚಳಗೇರಿ, ಪಿ.ಎನ್. ರಾಠೋಡ, ಎಂ.ಎಸ್.ಮಜ್ಜಿಗಿ, ಎಸ್.ಎನ್.ಬಿರಾದಾರ. ಎಮ್.ಎನ್.ಚವ್ಹಾಣ. ನಾಗರಾಜ ಅಂಗಡಿ ಹಾಗೂ ಸಿಬ್ಬಂದಿ ಇದ್ದರು.

## ಸಿಂದಗಿ: ಡಿಜಿ ಪ್ರಶಂಸಾ ಪದಕಕ್ಕೆ ಚೆನ್ನಬಸವಣ್ಣ ಆಯ್ಕೆ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ತಾಲೂಕಿನ ಚಾಂದಕವಠೆ ಗ್ರಾಮದ ಐಪಿಎಸ್ ಅಧಿಕಾರಿ ಚೆನ್ನಬಸವಣ್ಣ ಲಂಗೋಟಿ ಅವರು 2026ನೇ ಸಾಲಿನ ರಾಜ್ಯ ಪೊಲೀಸ್ ಮಹಾನಿರ್ದೇಶಕರ ಪ್ರಶಂಸಾ ಪದಕ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಪ್ರಸ್ತುತ ಮೈಸೂರಿನ ಪೊಲೀಸ್ ಅಕಾಡೆಮಿಯ ನಿರ್ದೇಶಕರಾಗಿರುವ ಇವರು ಬೆಳಗಾವಿ, ಬೆಂಗಳೂರು, ಬೀದರ್‌ನಲ್ಲಿ ಸೇವೆ ಸಲ್ಲಿಸಿದ್ದಾರೆ. ಮಹಿಳಾ ಸಮುದಾಯದ ಸುರಕ್ಷತೆಗಾಗಿ ಇವರು ಬೀದರ ಜಿಲ್ಲೆಯಲ್ಲಿ ಸ್ಥಾಪಿಸಿದ ಅಕ್ಕ ಪಡೆ ಅತ್ಯಂತ ಜನಪ್ರಿಯಗೊಂಡು ರಾಜ್ಯವ್ಯಾಪ್ತಿ ಬಳಸಲಾಗುತ್ತಿದೆ.

ಅಲ್ಲದೇ ದಕ್ಷಿಣ ಸುಡಾನ್‌ನಲ್ಲಿ ವಿಶ್ವ ಸಂಸ್ಥೆಯ ಪೊಲೀಸ್ ಸಲಹೆಗಾರರಾಗಿ ಹಾಗೂ ಕಾರ್ಯಾಚರಣೆಯ ಮುಖ್ಯಸ್ಥರಾಗಿ ಸೇವೆ ಸಲ್ಲಿಸಿ ಅಂತರ್‌ರಾಷ್ಟ್ರೀಯ ಅನುಭವ ತಮ್ಮದಾಗಿಸಿಕೊಂಡಿದ್ದಾರೆ. ಕವಿ, ಸಾಹಿತಿ, ಬರಹಗಾರರಾಗಿ ಗುರುತಿಸಿಕೊಂಡಿರುವ ಚೆನ್ನಬಸಪ್ಪ ಲಂಗೋಟಿ ಇವರ ಸೇವಾ ದಕ್ಷತೆ ಪರಿಗಣಿಸಿ ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಪ್ರಶಸ್ತಿಗೆ ಭಾಜನರಾಗಿದ್ದಕ್ಕೆ ಜಾನಪದ ಸಾಹಿತಿ ಇನ್ಸ್‌ಪೆಕ್ಟರ್ ಜ್ಯೋತಿರ್ಲಿಂಗ ಹೊನಕಟ್ಟಿ, ಆರಕ್ಷಕ ಬರಹಗಾರ ಮೌಲಾಲಿ ಆಲಗೂರ, ಶಿಕ್ಷಕ ಶರಣು ಲಂಗೋಟಿ ಸೇರಿದಂತೆ ತಾಲೂಕಿನ ಜನತೆ ಹರ್ಷವ್ಯಕ್ತಪಡಿಸಿದೆ

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR